ಸಂಪುಟ : ೮ ಸಂಚಿಕೆ :295 ಪುಟ : 4 ಬೆಲೆ : ೩.೦೦ ಗುರುವಾರ ಜನವರಿ 4, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 295 Pages : 4 Price : 3.00 Thursday JANUARY 4, 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಗದುಗಿನಲ್ಲಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದ ಪ್ರಮೋದ ಮುತಾಲಿಕ್

# ಕಾಂಗ್ರೆಸ್‌ನವರೇ ಬೆಂಕಿ ಹಚ್ಚುವ ಕೆಲಸ ಮಾಡುತ್ತಿದ್ದಾರೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಅಯೋಧ್ಯೆಯಲ್ಲಿ ರಾಮ ಮಂದಿರ ಉದ್ಘಾಟನೆಗೆ ಕೆಲವೇ ದಿನಗಳು ಬಾಕಿ ಉಳಿದಿವೆ. ಇಡೀ ದೇಶದ ಜನ ಸಂತೋಷದಲ್ಲಿದ್ದಾರೆ. ಇದನ್ನು ನೋಡಿ ಕಾಂಗ್ರೆಸ್‌ನವರಿಗೆ ತಡೆದುಕೊಳ್ಳಲು ಸಾಧ್ಯವಾಗುತ್ತಿಲ್ಲ. ಇದೇ ಸಮಯದಲ್ಲಿ ಇಲ್ಲ-ಸಲ್ಲದ ವಿಚಾರಗಳನ್ನು ಮುಂದಿಟ್ಟುಕೊಂಡು ಅಶಾಂತಿ ಸೃಷ್ಟಿಸುತ್ತಿದ್ದಾರೆ. ಹುಬ್ಬಳ್ಳಿಯಲ್ಲಿ ಬಂಧಿತರಾದ ಕರಸೇವಕರು ಆರೋಪಿಗಳೇ ಹೊರತು ಅಪರಾಧಿಗಳಲ್ಲ. ಆ ಮೂವರಿಗೂ ಬೇಲ್ ಸಿಕ್ಕಿದೆ. ಪ್ರಕರಣವನ್ನು ಮುಚ್ಚಬೇಕಾ, ಅವರನ್ನು ಗಲ್ಲಿಗೇರಿಸಬೇಕಾ, ಅದೇನೇ ಇದ್ದರೂ ನ್ಯಾಯಾಲಯದಲ್ಲಿ ನಿರ್ಧಾರವಾಗಲಿ. ಪ್ರಕರಣ ಕಳೆದ 30 ವರ್ಷಗಳಿಂದಲೂ ಚಾಲ್ತಿಯಲ್ಲಿತ್ತು. ನೀವೇನು 30 ವರ್ಷಗಳಿಂದ ನಿದ್ದೆ ಮಾಡುತ್ತಿದ್ದಿರಾ ಎಂದು ಶ್ರೀರಾಮ ಸೇನಾ ಸಂಘಟನೆಯ ಮುಖ್ಯಸ್ಥ ಪ್ರಮೋದ ಮುತಾಲಿಕ್ ಕಾಂಗ್ರೆಸ್ ಸರ್ಕಾರದ ವಿರುದ್ಧ ಆಕ್ರೋಶ ಹೊರ ಹಾಕಿದರು.

ಬುಧವಾರ ನಗರಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಹುಬ್ಬಳ್ಳಿಯಲ್ಲಿ ಹಿಂದೂ ಕಾರ್ಯಕರ್ತರ ಮೇಲಿನ ದೌರ್ಜನ್ಯವನ್ನು ಖಂಡಿಸಿ ಮಾತನಾಡಿದ ಅವರು, ಪೊಲೀಸ್ ಇಲಾಖೆಯವರು ರೀತಿ-ರಿವಾಜು ಇಲ್ಲದೆ, ಮಾನವೀಯತೆ ಮರೆತವರಂತೆ, ಕ್ರೂರವಾಗಿ ವರ್ತಿಸದಿರುವಂತೆ ಅವರಿಗೆ ಸೂಚನೆ ನೀಡಿ. ಕಾಂಗ್ರೆಸ್ ಸರ್ಕಾರ ಬಾಬರನ ಪರವಾಗಿ ನಿಂತಿದೆಯೇ ಹೊರತು ಶ್ರೀರಾಮನ ಪರವಾಗಿ ಅಲ್ಲ. ಶ್ರೀರಾಮನ ಪಾತ್ರವೇ ಕಾಲ್ಪನಿಕ, ಕಟ್ಟುಕಥೆ ಎಂದು ನೀವು ಸುಪ್ರೀಂ ಕೋರ್ಟ್‌ಗೆ ಅಫಿಡವಿಟ್ ಕೊಟ್ಟಿದ್ದೀರಿ. ಹುಬ್ಬಳ್ಳಿಯ ಘಟನೆಗೆ ಸಂಬಂಧಿಸಿ ಕಾನೂನು ಏನಿದೆಯೋ, ನ್ಯಾಯಾಲಯ ಏನು ಹೇಳುತ್ತದೆಯೋ ಹಾಗೇ ಮಾಡಿ. ಆದರೆ, ಮಾನವೀಯತೆಯ ಹಿನ್ನೆಲೆಯಲ್ಲಿ, ರೀತಿ-ರಿವಾಜುಗಳ ಬಗ್ಗೆಯೂ ಗಮನವಿರಲಿ ಎಂದು ಎಚ್ಚರಿಸಿದರು.




ಹುಬ್ಬಳ್ಳಿಯ ಘಟನೆ ಖಂಡನೀಯವಾಗಿದೆ. ಗಲಭೆ ಪ್ರಕರಣ ನಡೆದು ಆಗಲೇ 30 ವರ್ಷಗಳಾದವು. ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಸೂಚನೆ ಬಂದಿದ್ದರೆ ಅದಕ್ಕೂ ಒಂದು ಪದ್ಧತಿಯಿದೆ. ಬದಲಾಗಿ ರಾಮ ಜನ್ಮಭೂಮಿ ಅಯೋಧ್ಯೆಯಲ್ಲಿ ಐತಿಹಾಸಿಕ ಕಾರ್ಯಕ್ರಮ ಎದುರಿರುವಾಗ, ಅನಗತ್ಯವಾಗಿ ಹಿಂದೂ ಕಾರ್ಯಕರ್ತರಲ್ಲಿ, ರಾಮಸೇವಕರಲ್ಲಿ ಭಯದ ವಾತಾವರಣ ಸೃಷ್ಟಿಸುತ್ತಿದ್ದಾರೆ. ಆರೋಪಿಗಳನ್ನು ವಿಚಾರಣೆಗೆ ಒಳಪಡಿಸುವುದಾದರೂ ಒಂದು ಪದ್ಧತಿಯಿದೆ. ಬಂಧಿತರಲ್ಲಿ 60 ವರ್ಷ ಮೇಲ್ಪಟ್ಟವರಿದ್ದಾರೆ, ಅನಾರೋಗ್ಯದ ಸ್ಥಿತಿಯಲ್ಲಿದ್ದವರಿದ್ದಾರೆ. ಅವರನ್ನು ರಾತ್ರೋರಾತ್ರಿ ಬಂಧಿಸಿ ಕರೆದೊಯ್ಯಲು ಅವರೇನು ಭಯೋತ್ಪಾದಕ ಕೃತ್ಯವೆಸಗಿದ್ದಾರಾ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಶ್ರೀರಾಮನ ಸಲುವಾಗಿ ದೇಶಾದ್ಯಂತ ಲಕ್ಷಾಂತರ ಹಿಂದೂ ಕಾರ್ಯಕರ್ತರು ಹೋರಾಟ ಮಾಡಿದ್ದಾರೆ. ಅವರೆಲ್ಲರನ್ನೂ ಬಂಧಿಸುತ್ತೀರಾ? ಹೀಗೆಲ್ಲ 30 ವರ್ಷ ಹಿಂದಿನ ಪ್ರಕರಣವನ್ನು ಮುನ್ನೆಲೆಗೆ ತಂದು, ಭಯದ ವಾತಾವರಣ ಸೃಷ್ಟಿಸುವ ಅಗತ್ಯವಿಲ್ಲ. ಇನ್ನು ಒಬ್ಬೇ ಒಬ್ಬ ಹಿಂದೂ ಕಾರ್ಯಕರ್ತನನ್ನು ನೀವು ಬಂಧಿಸಿದರೂ ಇಡೀ ಕರ್ನಾಟಕವೇ ಹೊತ್ತಿ ಉರಿಯುತ್ತದೆ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಶ್ರೀರಾಮಸೇನಾದ ರಾಜು ಖಾನಪ್ಪನವರ ಸೇರಿದಂತೆ ಕಾರ್ಯಕರ್ತರು ಇದ್ದರು.

> ಕಾಂಗ್ರೆಸ್ ಮುಖಂಡ ಬಿ.ಕೆ. ಹರಿಪ್ರಸಾದ್ ಅವರ ಹೇಳಿಕೆ ಅತ್ಯಂತ ಖಂಡನೀಯ. ಗಂಡಾತರ ಸೃಷ್ಟಿಸುವ, ಸಲ್ಲದ ಪ್ರಚೋದನೆ ನೀಡುವ ಹೇಳಿಕೆಯದು. ಗೋಧ್ರಾ ಮಾದರಿಯಲ್ಲೇ ಘಟನೆ ಸಂಭವಿಸುತ್ತದೆ ಎಂದು ಇವರಿಗೆಲ್ಲೊ ಮಾಹಿತಿ ಸಿಕ್ಕಿದೆ. ಒಟ್ಟಾರೆಯಾಗಿ, ಕಾಂಗ್ರೆಸ್‌ನವರೇ ಬೆಂಕಿ ಹಚ್ಚುವ ಕೆಲಸ ಮಾಡುತ್ತಿದ್ದಾರೆ. ಗೃಹಸಚಿವರು ಬಿ.ಕೆ. ಹರಿಪ್ರಸಾದ್ ಹೇಳಿಕೆಯನ್ನು ಗಂಭೀರವಾಗಿ ಪರಿಗಣಿಸಿ ತನಿಖೆ ನಡೆಸಿ. ಮುಂದೇನಾದರೂ ಅಹಿತಕರ ಘಟನೆಗಳು ಸಂಭವಿಸಿದರೆ ಅದಕ್ಕೆ ಗೃಹಸಚಿವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಕಾರಣರಾಗುತ್ತಾರೆ ಎಂದರು.

# ಅಕ್ಷರದವ್ವನಿಗೆ ಸಾವಿರ ನಮನ



**■ವಿಜಯಸಾಕ್ಷಿ ಸುದ್ದಿ, ಗದಗ**

ಎಚ್ ಕೆ ಪಾಟೀಲ ಮಾನಾಡಿ, ಸಾವಿತ್ರಿಬಾಯಿ ಪುಲೆ ಸಮಾಜದ ಅತ್ಯಂತ ಹಿಂದುಳಿದ ಮಕ್ಕಳಿಗೂ ಶಿಕ್ಷಣ ನೀಡಬೇಕು, ಅವರನ್ನು ಸಮಾಜದ ಉನ್ನತ ಸ್ಥರಕ್ಕೆ ಕೊಂಡೊಯ್ಯಬೇಕು ಎಂಬ ಮಹತ್ತರವಾದ ಸಂಕಲ್ಪದೊಂದಿಗೆ ದಿಟ್ಟ ಹೆಜ್ಜೆಗಳನ್ನಿಟ್ಟವರು. ಸಮಾಜದಲ್ಲಿ ಅತ್ಯಂತ ಕಠಿಣ ಕಟ್ಟುಪಾಡುಗಳು ಜಾರಿಯಲ್ಲಿದ್ದ ಸಮಯದಲ್ಲಿ, ಹೆಣ್ಣುಮಕ್ಕಳೂ ಪುರುಷರ ಸಮಾನವಾಗಿ ಶಿಕ್ಷಣ ಪಡೆಯಬೇಕೆಂಬ ಸಂಕಲ್ಪವನ್ನು ಸಾಕಾರಗೊಳಿಸಲು ತಮ್ಮ ಜೀವನವನ್ನೇ ಮುಡಿಪಾಗಿಟ್ಟವರು ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಇಲ್ಲಿನ ಟಾಂಗಾ ಕೂಟ ಬಳಿ ಹಮ್ಮಿಕೊಂಡಿದ್ದ ಅಕ್ಷರದವ್ವ ಸಾವಿತ್ರಿಬಾಯಿ ಪುಲೆ ಅವರ ಜಯಂತಿಯ ನಿಮಿತ್ತ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಶಾಲಾ ವಿದ್ಯಾರ್ಥಿಗಳಿಗೆ ನೋಟ್‌ಬುಕ್ ವಿತರಿಸಿ ಮಾತನಾಡಿದರು.

ಶಿಕ್ಷಕರ ಸಮುದಾಯಕ್ಕೆ ಗೌರವ ನೀಡುವಂತೆ ಮಾಡಿದವರು ಸಾವಿತ್ರಿ ಬಾಯಿ. ಅವರ ಕಾಲದಲ್ಲಿ ಶಿಕ್ಷಣ ಅಷ್ಟು ಸುಲಭವಾಗಿರಲಿಲ್ಲ. ಸಮಾಜದ ಅವಮಾನವನ್ನೆಲ್ಲ ಎದುರಿಸಿ, ಸಾಧನೆ ಮಾಡಿದವರು ಅಕ್ಷರದ ಅವ್ವ ಸಾವಿತ್ರಿ ಬಾಯಿ ಪುಲೆ. ಸಮಾಜದಲ್ಲಿ ಸರ್ವರಿಗೂ ಸಮಾನ ಶಿಕ್ಷಣ ನೀಡುವ ದಿಟ್ಟ ನಿರ್ಧಾರ ತೆಗೆದುಕೊಳ್ಳುವ ಮೂಲಕ ಮಹತ್ತರವಾದುದನ್ನೇ ಸಾಧಿಸಿದ್ದಾರೆ. ಡಾ. ಅಂಬೇಡ್ಕರರು ಸಹ ಸರ್ವರಿಗೂ ಸಮಾನ ಹಕ್ಕು ದೊರಕಿಸುವಲ್ಲಿ ಕ್ರಾಂತಿ ಮಾಡಿ, ಇಂದು ನಮ್ಮೆಲ್ಲರಿಗೂ ಪ್ರೇರಣೆ ಆಗಿದ್ದಾರೆ ಎಂದು ನುಡಿದರು.

### ತಹಸೀಲ್ದಾರ್ ಕಚೇರಿಗೆ ಬರುವವರ ಕಣ್ಣೀರು ಒರೆಸುವುದಕ್ಕಿಂತ ಪುಣ್ಯದ ಕೆಲಸ ಬೇರೆ ಇಲ್ಲ: ಸಿಎಂ

# ಮಧ್ಯವರ್ತಿಗಳನ್ನು ನಿಮ್ಮ ಕಚೇರಿ ಬಳಿ ಸೇರಿಸದೆ ಜನಸೇವೆ ಮಾಡಿ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ತಹಸೀಲ್ದಾರ್ ಕಚೇರಿಗೆ ಬರುವವರ ಕಣ್ಣೀರು ಒರೆಸುವುದಕ್ಕಿಂತ ಪುಣ್ಯದ ಕೆಲಸ ಬೇರೆ ಇಲ್ಲ. ಮಾಸಲು ಬಟ್ಟೆಯಲ್ಲಿ, ಚಡ್ಡಿಯಲ್ಲಿ ಬರುವ ಬಡವರ ಕಣ್ಣೀರು ಒರೆಸಲು ಮುಂದಾಗಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರೆ ನೀಡಿದರು.

ಕರ್ನಾಟಕ ಆಡಳಿತ ಸೇವಾ ಅಧಿಕಾರಿಗಳ ಸಂಘದ 2024ನೇ ಸಾಲಿನ ದಿನಚರಿ ಮತ್ತು ವಾರ್ಷಿಕ ಕ್ಯಾಲೆಂಡರ್ ಬಿಡುಗಡೆ ಮಾಡಿ ಮುಖ್ಯಮಂತ್ರಿಗಳು ಮಾತನಾಡಿದರು.

ಸವೆದ ಚಪ್ಪಲಿ, ಹರಕಲು ಚೆಡ್ಡಿ, ಮಾಸಿದ ಬಟ್ಟೆಯ ಅವಿದ್ಯಾವಂತರ ಪರವಾಗಿ ನಿಮ್ಮ ಹೃದಯ ಮಿಡಿಯಬೇಕು. ನೀವು ಒಳ್ಳೆ ಕೆಲಸ ಮಾಡಿದರೆ ಸರ್ಕಾರಕ್ಕೆ ಒಳ್ಳೆಯ ಹೆಸರು ಬರುತ್ತದೆ. ಈ ಜವಾಬ್ದಾರಿಯನ್ನು ನಿರ್ವಹಿಸಿ, ಮಧ್ಯವರ್ತಿಗಳನ್ನು ನಿಮ್ಮ ಕಚೇರಿ



ಬಳಿ ಸೇರಿಸದೆ ಜನರ ಸೇವೆ ಮಾಡಿ ಎಂದರು.

ನಾವು, ನೀವು ರಾಜ್ಯದ 7 ಕೋಟಿ ಜನರ ಹಿತ ಕಾಯುವುದಕ್ಕಾಗಿ ಇದ್ದೇವೆ. ರಾಜಕಾರಣಿಗಳು ಜನರಿಂದ ರಿನೀವಲ್ ಆದರೆ ಮಾತ್ರ ಐದು ವರ್ಷದ ಬಳಿಕವೂ ಜನ ಸೇವೆಯಲ್ಲಿ ಇರುತ್ತಾರೆ. ಆದರೆ, ಕೆಎಎಸ್ ಅಧಿಕಾರಿಗಳು 30 ವರ್ಷಗಳ ಕಾಲ ನಿರಂತರ ಜನ ಸೇವೆಯಲ್ಲಿ ಇರುತ್ತೀರಿ. ಆದ್ದರಿಂದ ಹೆಚ್ಚು ಜನಪರವಾಗಿ ಇದ್ದು, ಜನರ ಕಷ್ಟ-ಸುಖಗಳಿಗೆ ಸ್ಪಂದಿಸಿ ಎಂದು ಕರೆ ನೀಡಿದರು.

ರಾಜಕಾರಣಗಳಿಗೆ, ಅಧಿಕಾರಿಗಳಿಗೆ ಜನರು ಸವಲತ್ತುಗಳನ್ನು ಒದಗಿಸಿದ್ದಾರೆ. ಜನರ ತೆರಿಗೆ ಹಣದಲ್ಲಿ ನಮಗೆ ಸವಲತ್ತುಗಳು ಸಿಕ್ಕಿವೆ. ಸುಗಮ ಜನಪರ ಆಡಳಿತ ನೀಡಲಿ ಎನ್ನುವ ಕಾರಣದಿಂದ ಜನರಿಂದ ನಮಗೆ ಈ ಎಲ್ಲ ಸೌಲಭ್ಯಗಳು ಸಿಕ್ಕಿವೆ. ಜನರ ಅಭ್ಯುದಯವೇ ನಮ್ಮ ಗುರಿ ಆಗಬೇಕು ಎಂದರು.

ಕೆಎಎಸ್ ಅಧಿಕಾರಿಗಳ ಸಂಘದ ಅಧ್ಯಕ್ಷ ಶಿವಸ್ವಾಮಿ ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಕಂದಾಯ ಸಚಿವ ಕೃಷ್ಣ ಭೈ-ರೇಗೌಡ, ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಭೈರತಿ ಸುರೇಶ್, ಸರ್ಕಾರದ ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು, ಕಂದಾಯ ಇಲಾಖೆ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಟಾರಿಯಾ, ಕಂದಾಯ ಇಲಾಖೆ ಆಯುಕ್ತ ಪಿ.ಸುನಿಲ್ ಕುಮಾರ್, ಸಂಘದ ಉಪಾಧ್ಯಕ್ಷ ಚನ್ನಬಸಪ್ಪ ವೇದಿಕೆಯಲ್ಲಿದ್ದರು.

> ಬಲಾಢ್ಯರು ದುರ್ಬಲರ ಮೇಲೆ ದೌರ್ಜನ್ಯ ನಡೆಸದಂತೆ ಎಚ್ಚರಿಕೆ ವಹಿಸಿ. ಸರ್ಕಾರದ ಸವಲತ್ತುಗಳನ್ನು ಅರ್ಹ ಫಲಾನುಭವಿಗಳಿಗೆ ಪರಿಣಾಮಕಾರಿಯಾಗಿ ತಲುಪಿಸಿ. ಸಣ್ಣ ಪುಟ್ಟ ರೆವಿನ್ಯೂ ಸಮಸ್ಯೆಗಳಿಗೆ ಜನರು ಸಿಎಂ ಬಳಿಗೆ ಬರುತ್ತಾರೆ ಎಂದರೆ ಅಧಿಕಾರಿಗಳು ಜನರ ಸಮಸ್ಯೆಗೆ ಸ್ಪಂದಿಸುತ್ತಿಲ್ಲ ಎಂದೇ ಪರಿಗಣಿಸಬೇಕಾಗುತ್ತದೆ ಎಂದೂ ಸಿ.ಎಂ ಎಚ್ಚರಿಸಿದರು.

# ಕಬೀರ್ ಮೊಬೈಲ್ ಕ್ಲಿನಿಕ್‌ಗೆ ಚಾಲನೆ ನೀಡಿದ ಸಚಿವ ಎಚ್.ಕೆ. ಪಾಟೀಲ

**■ವಿಜಯಸಾಕ್ಷಿ ಸುದ್ದಿ, ಗದಗ**

ಸೈಯದ್ ಅವರು ತಮ್ಮ ಉದ್ದಿಮೆಯಿಂದ ಬಂದ ಲಾಭದಿಂದ, ಸಮಾಜಸೇವೆಗಾಗಿ ಮೊಬೈಲ್ ಕ್ಲಿನಿಕ್ ಕೊಡುಗೆ ನೀಡಿದ್ದಾರೆ. ಈ ಭಾಗದಲ್ಲಿ ಅವರು ದೊಡ್ಡ ಕೈಗಾರಿಕೆ ಆರಂಭಿಸಿ, ಅನೇಕರಿಗೆ ಉದ್ಯೋಗ ನೀಡುವ ಹಂಬಲ ಹೊಂದಿದ್ದಾರೆ. ಅವರಿಗೆ ವೀರನಾರಾಯಣ ಒಳ್ಳೆಯದನ್ನು ಮಾಡಲಿ ಎಂದು ಸಚಿವ ಎಚ್. ಕೆ. ಪಾಟೀಲ ಹಾರೈಸಿದರು.




ಅವರು ಬುಧವಾರ ಇಲ್ಲಿನ ದಿ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಉದ್ಯಮಿ ಸೈಯದ್ ಅವರು ಜನತೆಯ ಸೇವೆಗಾಗಿ ಕೊಡುಗೆ ನೀಡಿದ ಮೊಬೈಲ್ ಕ್ಲಿನಿಕ್‌ನ್ನು ಉದ್ಘಾಟಿಸಿ ಮಾತನಾಡಿ, ಈ ವಾಹನ ಸೇವೆಯು ಗ್ರಾಮೀಣ ಹಾಗೂ ಕೊಳಚೆ ಪ್ರದೇಶಗಳ ಸಮುದಾಯದ ಜನರ ಆರೋಗ್ಯ ಸುದಾರಣೆಗೆ ಸಹಕಾರಿಯಾಗಲಿ. ಬಡ ಸಮುದಾಯದ ಆರೋಗ್ಯಯುತ ಜೀವನಕ್ಕೆ ಸಹಾಯಕವಾಗಲಿ. ನಮ್ಮ ಸೇವಾ ತಂಡವು ಇದರ ಪ್ರಯೋಜನ ಎಲ್ಲರಿಗೂ ದೊರಕಿಸಲು ಯೋಜನೆ ರೂಪಿಸಬೇಕು ಎಂದರು.

ಉದ್ಯಮಿ ಸೈಯದ್ ಮಾತನಾಡಿ, ದಿವಂಗತ ಕೆ.ಎಚ್. ಪಾಟೀಲರು ಸಮಾಜ ಸೇವೆ ಮಾಡಲು ನನಗೆ ಸ್ಪೂರ್ತಿಯಾಗಿದ್ದಾರೆ. ನಮ್ಮ ಸಂಸ್ಥೆಯ ವತಿಯಿಂದ ಸಚಿವರಿಗೆ ಧನ್ಯವಾದ ಸಲ್ಲಿಸುತ್ತೇವೆ ಎಂದರು.

ಎಥೆನಾಲ್ ಕೈಗಾರಿಕಾ ಘಟಕ ಸ್ಥಾಪನೆಗೆ ಲಕ್ಷ್ಮೇಶ್ವರ ಭಾಗದಲ್ಲಿ 20 ಎಕರೆ ಜಾಗದಲ್ಲಿ ಚಾಲನೆ ನೀಡಲಾಗುವುದು. 150 ಕೋಟಿ ವೆಚ್ಚದಲ್ಲಿ ಕೈಗಾರಿಕೆ ಅಭಿವೃದ್ಧಿ ಯೋಜನೆ ಸಿದ್ದವಾಗಿದೆ. ಅದಕ್ಕೆ ಸಚಿವರ ಸಹಾಯ-ಸಹಕಾರ ಅಗತ್ಯವಿದೆ ಎಂದರು.

ಮುಖಂಡ ಗುರಣ್ಣ ಬಳಗಾನೂರ ಮಾತನಾಡಿ, ಉಚಿತವಾಗಿ ಆಂಬ್ಯುಲೆನ್ಸ್ ನೀಡಿದ್ದಕ್ಕಾಗಿ ಸೈಯದ್ ಅವರಿಗೆ ಜನತೆಯ ಪರವಾಗಿ ಧನ್ಯವಾದ ಸಲ್ಲಿಸಿದರಲ್ಲದೆ, ಈ ಮೊಬೈಲ್ ಕ್ಲಿನಿಕ್‌ನಿಂದ ಸಾರ್ವಜನಿಕರಿಗೆ ಉತ್ತಮ ಚಿಕಿತ್ಸೆ ಲಭ್ಯವಾಗಲಿ ಎಂದರು.

### ಹಿಂದೂ ಕಾರ್ಯಕರ್ತರ ಬಂಧನ ಖಂಡಿಸಿ ಗದಗ ಜಿಲ್ಲಾ ಬಿಜೆಪಿಯಿಂದ ಪ್ರತಿಭಟನೆ, ಮನವಿ

# ಬಂಧಿತ ಕಾರ್ಯಕರ್ತರ ಬಿಡುಗಡೆಯಾಗಲಿ

**■ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದಲ್ಲಿ ಕಾಂಗ್ರೆಸ್ ನೇತೃತ್ವದ ಸಿದ್ದರಾಮಯ್ಯ ಸರ್ಕಾರ ತಮ್ಮ ಅಧಿಕಾರವನ್ನು ದುರ್ಬಳಕೆ ಮಾಡಿಕೊಂಡು, ಪೊಲೀಸರ ಮೇಲೆ ಒತ್ತಡ ಹೇರಿ, ಹಿಂದೂ ಕಾರ್ಯಕರ್ತರ ಬಂಧನಕ್ಕೆ ಮುಂದಾಗಿದೆ. ರಾಮ ಮಂದಿರದ ಉದ್ಘಾಟನೆ ಸಮೀಪಿಸುತ್ತಿದ್ದಂತೆ ಹಿಂದೂ ಕಾರ್ಯಕರ್ತರ ಮೇಲೆ ಇಲ್ಲಸಲ್ಲದ ಆರೋಪಗಳನ್ನು ಹೊರಿಸಿ ಬಂಧಿಸುತ್ತಿರುವ ಕಾರ್ಯವನ್ನು ಖಂಡಿಸಿ, ಪ್ರತಿಭಟನೆ ನಡೆಸಿದ ಗದಗ ಜಿಲ್ಲಾ ಬಿಜೆಪಿ ಕಾರ್ಯಕರ್ತರು, ಗದಗ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು.

ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಬಂಧನಕ್ಕೆ ಒಳಗಾದ ಹಿಂದೂ ಕಾರ್ಯಕರ್ತರನ್ನು ಕೂಡಲೇ ಬಿಡುಗಡೆಗೊಳಿಸಲು ಸರ್ಕಾರಕ್ಕೆ ಆದೇಶಿಸಬೇಕು. ನಮ್ಮ ಬೇಡಿಕೆ ಈಡೇರದಿದ್ದಲ್ಲಿ ರಾಜ್ಯವ್ಯಾಪಿ ತೀವ್ರ




ಹೋರಾಟ ಕೈಗೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷ ಮುತ್ತಣ್ಣ ಲಿಂಗನಗೌಡ್ರ, ಶ್ರೀಪತಿ ಉಡುಪಿ, ತೊಟಪ್ಪ ಕುಡರಗಿ, ರವಿ ದಂಡಿನ, ಸಿದ್ದು ಪಲ್ಲೇದ, ಉಷಾ ದಾಸರ, ಅಶೋಕ ನವಲಗುಂದ, ಅಶೋಕ ಸಂಕಣ್ಣವರ, ಅನಿಲ ಅಬ್ಬಿಗೇರಿ, ನಿಂಗಪ್ಪ ಮಣ್ಣೂರ, ಭದ್ರೇಶ ಕುಸ್ಲಾಪೂರ, ಬೂದಪ್ಪ ಹಳ್ಳಿ, ಅಶೋಕ ಕುಡತಿನಿ, ಶೇಖರ ಸಜ್ಜನರ, ಅಶೋಕ ಕರೂರ, ಲಕ್ಷ್ಮಣ ದೊಡ್ಮನಿ, ಜಗನ್ನಾಥಸಾ ಭಾಂಡಗೆ, ಮಹಾದೇವಪ್ಪ ಚಿಂಚಲಿ, ನಿರ್ಮಲಾ ಕೊಳ್ಳಿ, ಮುತ್ತು ಮುಶಿಗೇರಿ, ರಾಘವೇಂದ್ರ ಯಳವತ್ತಿ, ಸುಧೀರ ಕಾಟಿಗರ, ಶಂಕರ ಕಾಕಿ, ವಿದ್ಯಾವತಿ ಗಡಗಿ, ವಿಜಯಲಕ್ಷ್ಮೀ ದಿಂಡೂರ, ವಂದನಾ ವರ್ಣೇಕರ, ವಿಜಯಲಕ್ಷ್ಮೀ ಮಾನ್ವಿ, ಅಕ್ಕಮ್ಮ ವಸ್ತ್ರದ, ಸುರೇಶ ಮರಳಪ್ಪನವರ, ವಾಯ್.ಪಿ. ಅಡ್ನೂರ, ರವಿ ವಗ್ಗನವರ, ಮಂಜುನಾಥಸ್ವಾಮಿ, ಅಪ್ಪಣ್ಣ ಟೆಂಗಿನಕಾಯಿ, ಸುರೇಶ ಮರಳಪ್ಪನವರ, ಅಮರನಾಥ ಗಡಗಿ, ಶಾರದಾ ಸಜ್ಜನರ, ಪಾರ್ವತಿ ಪಟ್ಟಣಶೆಟ್ಟಿ, ಸ್ವಾತಿ ಅಕ್ಕಿ, ರಮೇಶ ಸಜ್ಜಗಾರ, ಕಮಲಾಕ್ಷಿ ಗೊಂದಿ, ಮಾಂತೇಶ ಬಾತಾಖಾನಿ, ರೇಖಾ ಬಂಗಾರಶೆಟ್ಟರ, ಶಶಿಧರ ದಿಂಡೂರ, ಅಶ್ವಿನಿ ಜಗತಾಪ್, ನವೀನ ಕೊಟೆಕಲ್, ವಸಂತ ಹಬೀಬ, ಕೆ.ಪಿ. ಕೋಟಿಗೌಡ್ರ, ಮಹೇಶ ದಾಸರ, ಶೆಖಣ್ಣ ಕನ್ಯಾಳ, ವೆಂಕಟೇಶ ಕೋಣಿ ಸಿದ್ದಪ್ಪ ಈರಗಾರ, ಬಸವರಾಜ ಬಡಿಗೇರ ಮುಂತಾದವರಿದ್ದರು.

## ಸಂಪಾದಕೀಯ

### ಕಾಂಗ್ರೆಸ್ಸನ್ನ ಬಂಧಿಸಿದ ಶ್ರೀರಾಮ

ಅಯೋಧ್ಯೆಯಲ್ಲಿ ಶ್ರೀರಾಮ ಮಂದಿರ ಉದ್ಘಾಟನೆಗೆ ಇನ್ನು 20 ದಿನ ಬಾಕಿ ಇದೆ. ಆದರೆ ಎರಡು ತಿಂಗಳಿಂದ ಕಾಂಗ್ರೆಸ್ ಪಕ್ಷವನ್ನು ಪ್ರಭು ಶ್ರೀರಾಮನ ಹೆಸರಿನಲ್ಲಿ ಬಿಜೆಪಿ ಕಟ್ಟಿ ಹಾಕುವುದರಲ್ಲಿ ಯಶಸ್ವಿಯಾಗಿದೆ.

ಅಯೋಧ್ಯೆಯಲ್ಲಿ ಹೊಸ ವಿಮಾನ ನಿಲ್ದಾಣ, ಹೊಸ ರೈಲ್ವೆ ಸ್ಟೇಷನ್ ನಿರ್ಮಾಣ ಅಥವಾ ಮಂದಿರದ ಪ್ರಾಣ ಪ್ರತಿಷ್ಠಾಪನೆಗೆ 1000 ಸಾವಿರ ರೈಲುಗಳ ಸಂಚಾರ... ಹೀಗೆ ಹತ್ತು ಹಲವು ಕಾರ್ಯಕ್ರಮಗಳ ಮೂಲಕ ಜನರನ್ನು ಅಯೋಧ್ಯೆಯತ್ತ ಕೇಂದ್ರೀಕರಿಸುವ ಮೂಲಕ ಕೈ ಪಾಳಯವನ್ನು ಕಟ್ಟಿ ಹಾಕಿದೆ.

ಬಿಜೆಪಿಯ ಈ ಶ್ರೀರಾಮ ಮಂದಿರ ತಂತ್ರಕ್ಕೆ ಕಾಂಗ್ರೆಸ್ ಬಳಿ ಪ್ರತಿತಂತ್ರ ಇಲ್ಲದಂತಾಗಿದೆ. ಮಂದಿರ ವಿಷಯವನ್ನು ಬಿಜೆಪಿ ಅತ್ಯಂತ ವ್ಯವಸ್ಥಿತವಾಗಿ ರಾಜಕೀಯಕ್ಕೆ ಬಳಸಿಕೊಳ್ಳುತ್ತಿದೆ. ಅದು ಲೋಕಸಭೆ ಚುನಾವಣೆ ಸಂದರ್ಭದಲ್ಲಿ ಬಿಜೆಪಿಗೆ ಸದ್ಯಕ್ಕೆ ಶ್ರೀರಾಮನೇ ಕೈ ಹಿಡಿಯಬೇಕಾದ ಅನಿವಾರ್ಯತೆ ಬಂದಿದೆ.

ಮಂದಿರ ಉದ್ಘಾಟನೆಯ ಆಮಂತ್ರಣದ ವಿಷಯದಿಂದ ಹಿಡಿದುಕೊಂಡು ಪ್ರತಿಯೊಂದಕ್ಕೂ ಶ್ರೀ ರಾಮನ ಹೆಸರಲ್ಲಿ ಕಾಂಗ್ರೆಸ್ ನಾಯಕರನ್ನು ಬಿಜೆಪಿ ಕೆರಳಿಸುತ್ತಿದೆ. ಈ ತಂತ್ರಗಾರಿಕೆ ಹರಿಹರ ಕಾಂಗ್ರೆಸ್ ನಾಯಕರು ಇಲ್ಲಸಲ್ಲದ ಹೇಳಿಕೆ ನೀಡುವ ಮೂಲಕ ಹಿಂದೂ ವಿರೋಧಿ ಎನ್ನುವ ಪಟ್ಟ ಕಟ್ಟಿಕೊಳ್ಳುತ್ತಿದ್ದಾರೆ.

ಪ್ರತಿ ಲೋಕಸಭೆ ಚುನಾವಣೆ ಬಂದಾಗಲೂ ಬಿಜೆಪಿ ಇಂಥದೊಂದು ರಣತಂತ್ರವನ್ನು ರೂಪಿಸುತ್ತಲೇ ಬಂದಿದೆ. ಈಗ ರಾಮ ಮಂದಿರ ವಿಷಯವನ್ನು ಮುಂದಿಟ್ಟುಕೊಂಡು ಭಾವನಾತ್ಮಕವಾಗಿ ಜನರನ್ನ ಹಿಡಿದಿಡುವ ಕೆಲಸ ಮಾಡುತ್ತಿದೆ. ಚುನಾವಣೆ ಎಂದರೆ ಹಣ ಹೆಂಡದ ರಾಜಕೀಯ ಎಂದು ಭಾವಿಸಿದ್ದ ನಾಯಕರಿಗೆ ಮತ್ತು ಪಕ್ಷಗಳಿಗೆ ಬಿಜೆಪಿ ಅದನ್ನು ಮೀರಿಯೂ ಮತ ಸೆಳೆಯುವ ತಂತ್ರಗಾರಿಕೆ ಅರ್ಥವಾಗಿದೆ.

ಲೋಕಸಭೆ ಚುನಾವಣೆಗೆ ಇನ್ನೂ ತಿಂಗಳುಗಳು ಬಾಕಿ ಇವೆ. ಆದರೆ ಬಿಜೆಪಿ ಹೊಸ ಘೋಷ ವಾಕ್ಯ ಒಂದನ್ನು ಪ್ರಕಟಿಸಿದೆ. ತೀಸ್ರಿ ಬಾರ್ ಮೋದಿ ಸರ್ಕಾರ್, ಇಸ್ ಬಾರ್ 400ಕೆ ಪಾರ್. ಅಂದರೆ ಮೂರನೇ ಬಾರಿಗೆ ನರೇಂದ್ರ ಮೋದಿ ಪ್ರಧಾನಿ, 400ಕ್ಕೂ ಹೆಚ್ಚು ಕಡೆಗಳಲ್ಲಿ ಬಿಜೆಪಿ ಗೆಲುವು ಎನ್ನುವುದಾಗಿದೆ.

ಈ ಮಧ್ಯೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ನೇತೃತ್ವದಲ್ಲಿ ಮತ್ತೊಂದು ಯಾತ್ರೆ ಘೋಷಣೆಯಾಗಿದೆ. ಆದರೆ ಶ್ರೀರಾಮ ಮಂದಿರ ರಾಜಕಾರಣದಲ್ಲಿ ಅದು ಮಂಕಾಗಿದೆ. ಬಿಜೆಪಿಯ ಈ ನಡೆ ಮತ್ತೊಮ್ಮೆ ಕಾಂಗ್ರೆಸಿಗೆ ಆಘಾತ ನೀಡುವ ಸಾಧ್ಯತೆಯಿದೆ.

---

**ಬಸವ ಯೋಗ ಮಂದಿರದ ಹರ್ಷೋತ್ಸವ-2024 ಕಾರ್ಯಕ್ರಮದಲ್ಲಿ ಡಾ. ಜಿ.ಬಿ. ಪಾಟೀಲ**

# ಚಿಂತನಶೀಲ ಸಂತರಿಂದ ಸಮಾಜೋನ್ನತಿ ಸಾಧ್ಯ



ಬೆಳಗಾವಿಯ ಶ್ರೀ ರುದ್ರಾಕ್ಷಿಮಠ ಪ್ರತಿವರ್ಷ ಸಾಧಕರಿಗೆ ಕೊಡಮಾಡುವ 'ಸೇವಾರತ್ನ' ಪ್ರಶಸ್ತಿಗೆ ಭಾಜನರಾದ ಶ್ರೀ ತೆ-ಋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟಿ, ಯೋಗ ಯುನಿವರ್ಸಿಟಿ ಆಫ್ ದಿ ಅಮೇರಿಕಾ ಫ್ಲೋರಿಡಾ ವಿಶ್ವವಿದ್ಯಾಲಯದಿಂದ ಯೋಗ ವಿಷಯವಾಗಿ ಪಿ.ಹೆಚ್‌ಡಿ ಪದವಿ ಪಡೆದ ಡಾ. ಎಸ್.ಎಸ್. ಹಿರೇಮಠರನ್ನು ಸನ್ಮಾನಿಸಲಾಯಿತು.

**ವಿಜಯಸಾಕ್ಷಿ ಸುದ್ದಿ, ಗದಗ**

ವ್ಯಕ್ತಿಯ ಒಳಿತಿಗೆ ಮತ್ತು ಸಮಾಜದ ಉನ್ನತಿಗೆ ದೈಹಿಕ, ಮಾನಸಿಕ, ಸಾಮಾಜಿಕ, ಧಾರ್ಮಿಕ ಹಾಗೂ ನೈತಿಕವಾಗಿ ಹಿತ ಬಸುವವರನ್ನು ಚಿಂತನಶೀಲ ಸಂತರೆಂದು ಕರೆಯಬಹುದು. ಬುದ್ಧ, ಬಸವ, ಅಂಬೇಡ್ಕರ, ವಿವೇಕಾನಂದ, ಸಿದ್ಧಗಂಗಾ ಶ್ರೀಗಳು, ಪುಟ್ಟರಾಜ ಗವಾಯಿಗಳು, ತೆ-ಋಂಟದ ಸಿದ್ಧಲಿಂಗ ಸ್ವಾಮಿಗಳು, ಸಿದ್ಧೇಶ್ವರ ಸ್ವಾಮಿಗಳು ಮಹಾನ್ ಚಿಂತನಶೀಲ ಸಂತರಾಗಿದ್ದಾರೆ. ಇವರೆಲ್ಲರ ಪುಣ್ಯಫಲದಿಂದ ನಾವಿಂದು ಸೌಹಾರ್ದ, ಸೌಜನ್ಯ, ಸಹಕಾರ ಸಮಾನತೆಗಳಿರುವ ಸಮಾಜದಲ್ಲಿ ಬದುಕಿದ್ದೇವೆ ಎಂದು ಡಿ.ಜಿ.ಎಂ. ಕಾಲೇಜಿನ ನಿವೃತ್ತ ಪ್ರಾಚಾರ್ಯ ಜಿ.ಬಿ. ಪಾಟೀಲ ತಿಳಿಸಿದರು.

ಇಲ್ಲಿನ ಎಸ್‌ವಾಯ್‌ಬಿಎಂಎಸ್ ಯೋಗಪಾಠಶಾಲೆಯ ಬಸವ ಯೋಗ ಕೇಂದ್ರ ಮತ್ತು ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಗದಗ ಇವರು ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ನೂತನ ಕ್ಯಾಲೆಂಡರ್ ವರ್ಷಾಚರಣೆ ಪ್ರಯುಕ್ತ ಆಯೋಜಿಸಿದ್ದ ಹರ್ಷೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ಯೋಗ ಒಕ್ಕೂಟದ ಅಧ್ಯಕ್ಷ ಎಂ.ಎಸ್. ಶಿರಿಯಣ್ಣವರ ಮಾತನಾಡಿ, ನೂರಾರು ಆಸ್ಪತ್ರೆಗಳನ್ನು ತೆರೆಯುವ ಬದಲು ಊರಿಗೊಂದು ಯೋಗ ವಿದ್ಯಾಲಯ ಸ್ಥಾಪಿಸಿದರೆ ಜನತೆ ಆರೋಗ್ಯವಂತರಾಗುತ್ತಾರೆ. ಅರ್ಥಹೀನ ಕಾರ್ಯಕ್ರಮಗಳ ಆಚರಣೆ ಕಡಿಮೆಯಾಗಿ, ಉತ್ತಮ ಯುವ ಸಮೂಹ ನಿರ್ಮಾಣವಾಗುತ್ತದೆ. ನಾವೆಲ್ಲರೂ ಈ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗಬೇಕೆಂದು ಸೂಚಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಎಸ್.ಎಸ್. ಪಟ್ಟಣಶೆಟ್ಟಿ, ಪೂಜ್ಯರು ಸ್ಥಾಪಿಸಿದ ಯೋಗ ಪಾಠಶಾಲೆಯನ್ನು ನಾಲ್ಕು ದಶಕ ಕಾಲದಿಂದಲೂ ನಡೆಸುತ್ತಿರುವದಲ್ಲದೆ ಕರ್ನಾಟಕ ವಿಶ್ವವಿದ್ಯಾಲಯದ ಸಂಯೋಜನೆಯಲ್ಲಿ ಯೋಗ ಸರ್ಟಿಫಿಕೇಟ್ ಮತ್ತು ಪಿ.ಜಿ. ಡಿಪ್ಲೋಮಾ ಕೋರ್ಸುಗಳನ್ನು ನಡೆಸುವದರೊಂದಿಗೆ ರಚನಾತ್ಮಕ ಕಾರ್ಯಕ್ರಮಗಳನ್ನು ರೂಪಿಸಿ, ಸಾಧಕರನ್ನು ಗುರುತಿಸಿ ಪ್ರೋತ್ಸಾಹಿಸುತ್ತಿರುವದು ಶ್ಲಾಘನೀಯ ಕಾರ್ಯವಾಗಿದೆ ಎಂದರು.

ಡಾ. ಎಸ್.ಎಸ್. ಹಿರೇಮಠ ಮಾತನಾಡಿ, ಗುರಿ ಮತ್ತು ಗುರುಗಳ ಪ್ರೇರಣೆಯಿಂದ ಸಾಧಕ ತನ್ನ ಗುರಿ ಮುಟ್ಟಲು ಸಾಧ್ಯ. ನಾನು ಯೋಗ ವಿಷಯದಲ್ಲಿ ಪಿ.ಎಚ್‌ಡಿ. ಪದವಿ ಪಡೆಯಲು ನಾನಿಟ್ಟುಕೊಂಡ ಗುರಿ ಹಾಗೂ ಯೋಗಾಚಾರ್ಯ ಕೆ.ಎಸ್. ಪಲ್ಲೇದ ಮತ್ತು ಡಾ. ಯೋಗಿ ದೇವರಾಜ ಗುರುಗಳ ಕೃಪಾಕಾರುಣ್ಯಗಳು ಕಾರಣವಾಗಿವೆ. ಪ್ರಸ್ತುತ ಯುವಜನತೆ ಗುರಿ ಮತ್ತು ಗುರುಗಳ ಮಾರ್ಗದರ್ಶನದಲ್ಲಿ ಬೆಳೆಯುವುದು ಅಗತ್ಯವಾಗಿದೆ. ಜೊತೆಗೆ ಯೋಗ ಶಿಕ್ಷಣ ಪ್ರಸಾರ ಕಾರ್ಯಗಳಿಗೆ ಸಹಕರಿಸುವುದು ಅಷ್ಟೇ ಪ್ರಮುಖವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಂಗವಾಗಿ ಬೆಳಿಗ್ಗೆ ಸಾಮೂಹಿಕ ಸೂರ್ಯನಮಸ್ಕಾರ ಯಜ್ಞ ನಡೆಯಿತು. ಸಂಜೆ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಕೃಷ್ಣಪ್ರಿಯಾ ಹಾಗೂ ತನುಶ್ರೀ ಭಾವಗೀತೆ ಹಾಡಿದರು. ಖುಷಿ ಮಡಿವಾಳರ, ವೀಣಾ ಮಾಲಿಪಾಟೀಲ, ಅರುಣಾ ಇಂಗಳಳ್ಳಿ ಜಾನಪದ ನೃತ್ಯ ಪ್ರದರ್ಶಿಸಿದರು.

ವೇದಿಕೆಯಲ್ಲಿ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಗೌರವಾಧ್ಯಕ್ಷೆ ಅನ್ನಪೂರ್ಣಕ್ಕ ವರವಿ, ಅಧ್ಯಕ್ಷೆ ಜಯಶ್ರೀ ವಸ್ತ್ರದ ಉಪಸ್ಥಿತರಿದ್ದು, ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಭೆಯಲ್ಲಿ ಸಂಗಮೇಶ್ವರ ಆನೆಹೊಸೂರು, ಬಸವರಾಜ ತೋಟಗೇರ, ಎಸ್.ಬಿ. ಮೆಣಸಗಿ, ಫಕೀರಗೌಡ ಮುಂದಿನಮನಿ, ಆನಂದ ಬದಿ, ಸುನೀಲ ಹಿರೇಮಠ, ಗಂಗಾಧರ ಕೆಂಗಾರ, ವಿಜಯಲಕ್ಷ್ಮೀ ಚನಶೆಟ್ಟಿ, ಸಂಗೀತ ನಾಕೋಡ, ಶಾಂತಾ ಕುಂದಗೋಳ, ಲಲಿತಾ ಅಣ್ಣಿಗೇರಿ, ಸುಲೋಚನಾ ಐಹೊಳ್ಳಿ, ಲಲಿತಾ ಕಡಗದ, ಸಂಜನಾ ಸಜ್ಜನರ ಯೋಗಪಾಠ ಶಾಲೆಯ ವಿದ್ಯಾರ್ಥಿ ವೃಂದ, ಗಣ್ಯಮಾನ್ಯರು ಉಪಸ್ಥಿತರಿದ್ದರು.

ಗಿರಿಜಾ ನಾಲತ್ವಾಡಮಠ, ವಿಜಯಲಕ್ಷ್ಮೀ ಆನೆಹೊಸೂರ, ವಿಜಯಲಕ್ಷ್ಮೀ ಮೇಕಳಿ ಹೊಸ ವರ್ಷಕೆ ಸ್ವಾಗತ ಕೋರುವ ಪ್ರಾರ್ಥನೆ ಹೇಳಿದರು. ಡಾ. ಎಸ್.ಕೆ. ನಾಲತ್ವಾಡಮಠ ಸ್ವಾಗತಿಸಿದರು. ಶಾಂತಾ ಮುಂದಿನಮನಿ ಕಾರ್ಯಕ್ರಮ ನಿರೂಪಿಸಿದರು. ವಿ.ಎಂ. ಮುಂದಿನಮನಿ ವಂದಿಸಿದರು. ಡಾ. ಎಂ.ವ್ಹಿ. ಐಹೊಳ್ಳಿ ಪ್ರಸಾದ ವಿತರಣೆ ಕಾರ್ಯ ನಿರ್ವಹಿಸಿದರು.

---

## ಸಾವಿತ್ರಿಬಾಯಿ ಪುಲೆ ಜಯಂತಿ ಆಚರಣೆ



**ವಿಜಯಸಾಕ್ಷಿ ಸುದ್ದಿ, ಗದಗ**

ಎಸ್.ಎಂ. ಕೃಷ್ಣಾ ನಗರದ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ ನಂ.12ರಲ್ಲಿ ಭಾರತದ ಪ್ರಥಮ ಶಿಕ್ಷಕಿ ಸಾವಿತ್ರಿಬಾಯಿ ಪುಲೆ ಜಯಂತಿ ಆಚರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಬಸವರಾಜ ಕಡೇಮನಿ, ಸಾವಿತ್ರಿಬಾಯಿ ಪುಲೆ ಅವರ ಕುರಿತು ಶಾಲೆಯ ಪ್ರಭಾರಿ ಮುಖ್ಯೋಪಾಧ್ಯಾಯ ಎಚ್.ಆರ್. ಕೋಣೆಮನಿ, ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಅನಿಲಕುಮಾರ ಸಿದ್ದಮ್ಮನಹಳ್ಳಿ ಅವರು ಸಾವಿತ್ರಿಬಾಯಿ ಪುಲೆಯವರ ಸಾಧನೆಯನ್ನು ಕೊಂಡಾಡಿದರು. ಶಾಲೆಯ ಸಹಶಿಕ್ಷಕಿಯರಾದ ವಿ.ಜಿ. ಪಾಟೀಲ ಹಾಗೂ ಮಧುರಾರವರು ಸಾವಿತ್ರಿಬಾಯಿ ಪುಲೆರವರ ಜೀವನ ಚರಿತ್ರೆಯ ಕುರಿತು ಮಾತನಾಡಿದರು.

ಫಾರೂಕ ಬಾರಿಗಿಡದ, ಎಲ್.ಎಫ್. ಮುಲ್ಲಾನವರ, ದುದ್ದುಗೌಡ ಪಾಟೀಲ, ರಮೇಶ ಹೊಟ್ಟಿ, ಪ್ರಕಾಶ ಕಲ್ಬುರ್ಗಿ ಅತಿಥಿಗಳಾಗಿ ಭಾಗವಹಿಸಿದ್ದರು. ವಿದ್ಯಾರ್ಥಿಗಳು ಪ್ರಾರ್ಥಿಸಿದರು. ದೈಹಿಕ ಶಿಕ್ಷಕ ಎಸ್.ಬಿ. ಮುಳಗುಂದ ಸ್ವಾಗತಿಸಿದರು. ಎಂ.ಕೆ. ಹುಯಿಲಗೋಳ ಕಾರ್ಯಕ್ರಮ ನಿರೂಪಿಸಿದರು. ಎಸ್.ಬಿ. ಕಣಕಿ ವಂದಿಸಿದರು.

---

# ನಿವೃತ್ತ ನೌಕರರ ಜನ್ಮದಿನ ಆಚರಣೆ




**ವಿಜಯಸಾಕ್ಷಿ ಸುದ್ದಿ, ಗದಗ**

ಸಂಗೀತವು ಮನುಷ್ಯ ಜೀವನದಲ್ಲಿ ಎದುರಾಗುವ ಚಿಂತೆ, ಉದ್ವೇಗ, ಅನಾರೋಗ್ಯ ಮುಂತಾದ ಸಮಸ್ಯೆಗಳನ್ನು ದೂರ ಮಾಡುತ್ತದೆ. ನಿತ್ಯ ಸಂಗೀತ ಕೇಳುವುದರಿಂದ ವ್ಯಕ್ತಿಯ ಆರೋಗ್ಯ ವೃದ್ಧಿಯಾಗುತ್ತದೆ. ಹಿರಿಯರು ಆರೋಗ್ಯವಂತರಾಗಿರಲು ನಿತ್ಯ ವಾಯು ವಿಹಾರ, ಧ್ಯಾನ, ಪ್ರಾಣಾಯಾಮ, ಸಂಗೀತ ಕೇಳುವದು ಮುಂತಾದವುಗಳ ಕಡೆಗೆ ಒಲವು ತೋರಬೇಕು ಎಂದು ಆಯ್.ಕೆ. ಮಣಕವಾಡ ನುಡಿದರು.

ಅವರು ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘ ಗದಗ ಜಿಲ್ಲಾ ಘಟಕದ ವತಿಯಿಂದ ಹಮ್ಮಿಕೊಂಡಿದ್ದ ಸಂಘದ ಸದಸ್ಯರ ಜನ್ಮದಿನ ಆಚರಣೆ ಹಾಗೂ ಸಂಗೀತ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಪ್ರಸನ್ನಕುಮಾರ ಶಾಬಾದಿಮಠ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷ ಪ್ರೊ. ಕೆ.ಎಚ್. ಬೇಲೂರ ವಹಿಸಿದ್ದರು. ಡಿಸೆಂಬರ್ ತಿಂಗಳಲ್ಲಿ ಜನ್ಮದಿನ ಆಚರಿಸಿಕೊಂಡ ಎಸ್.ವ್ಹಿ. ನಾರಾಯಣಪೂರ, ಬಿ.ಸಿ. ಮರಿಗೌಡರ, ಡಿ.ಎಂ. ಬೀರನೂರ, ಪುಷ್ಪಾ ಬಿ. ಹಿರೇಮಠ ಸೇರಿದಂತೆ 22 ಸದಸ್ಯರಿಗೆ ಶುಭ ಕೋರಲಾಯಿತು.

ಕಾರ್ಯಕ್ರಮದಲ್ಲಿ ಸಂಘದ ಹಿರಿಯ ಸದಸ್ಯರಾದ ಎಲ್.ಎಸ್. ನೀಲಗುಂದ, ಬಿ.ಡಿ. ಕಿಲಬನವರ, ಕೆ.ಜಿ. ಹಿರೇಮಠ, ಬಿ.ಬಿ. ಹಾಲನವರ, ಜಿ.ಕೆ. ಮಡಿವಾಳರ, ಟಿ.ಇ. ಕಾಳೆ, ಆರ್.ಡಿ. ಕಪ್ಪಲಿ, ಕೆ.ಎಸ್. ಗುಗ್ಗರಿ, ನಿವೃತ್ತ ಪಿ.ಎಸ್.ಐ ನಾಗರಳ್ಳಿ, ಎಸ್.ಎಸ್. ಬಳ್ಳಾರಿ, ವಾಯ್.ಕೆ. ಪಡಗಣ್ಣವರ ಜಿ.ಕೆ. ತಮ್ಮಣ್ಣವರ, ಪ್ರೊ.ಎಂ.ಬಿ. ಹಳ್ಳಿ, ಕಂಬಿಮಠ, ಎಂ.ಎಫ್. ಡೋಣಿ, ಎನ್.ವ್ಹಿ. ಸಜ್ಜನರ ಮುಂತಾದವರು ಹಾಜರಿದ್ದರು.

ವೇದಿಕೆಯ ಮೇಲೆ ಗೌಡಪ್ಪಗೌಡ್ರು, ಜಿ.ವ್ಹಿ. ಮಳಲಿ, ಬಿ.ಎಂ. ಬಿಳೆಯಲಿ ಮುಂತಾದವರಿದ್ದರು. ಬಿ.ಸಿ. ಮರಿಗೌಡರ ಅಧ್ಯಕ್ಷರಿಗೆ ಕಾಲರ್ ಧಾರಣೆ ಮಾಡಿದರು. ಜಯಶ್ರೀ ಖಾನಾಪೂರ ಪ್ರಾರ್ಥಿಸಿದರು.

ಜಿ.ಕೆ ತಮ್ಮಣ್ಣವರ ಸ್ವಾಗತಿಸಿದರು. ಪ್ರಧಾನ ಕಾರ್ಯದರ್ಶಿ ಪ್ರೊ. ಎಂ.ಸಿ. ವಗ್ಗಿ ಕಾರ್ಯಕ್ರಮ ನಿರುಪಿಸಿದರು. ಪ್ರೊ. ಎಂ.ಬಿ ಹಳ್ಳಿ ವಂದಿಸಿದರು.

---

# ಕಾಯಕ ಜೀವಿಗಳನ್ನು ಸನ್ಮಾನಿಸಿದ್ದು ಶ್ರೇಷ್ಠ ಕಾರ್ಯ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಸವಿತಾ ಸಮಾಜದಿಂದ ದಿ. ಜಗನ್ನಾಥ ಕ್ಷೀರಸಾಗರ ಅವರಿಗೆ ಮರಣೋತ್ತರವಾಗಿ 'ಕ್ಷೌರಿಕ ರತ್ನ' ಪ್ರಶಸ್ತಿ ಪ್ರದಾನದೊಂದಿಗೆ, ವಿವಿಧ ಸ್ಥರಗಳಲ್ಲಿ ಕುಲವೃತ್ತಿ ಸೇವೆ ಸಲ್ಲಿಸುತ್ತಿರುವ 5 ಐದು ಜನ ಶ್ರಮಜೀವಿಗಳನ್ನು ಗುರುತಿಸಿ ಅವರಿಗೆ 'ಶ್ರಮ ಗೌರವ' ಪ್ರಶಸ್ತಿ ನೀಡಿ ಸನ್ಮಾನಿಸಿರುವುದು ಶ್ರೇಷ್ಠ ಕಾರ್ಯವಾಗಿದೆ ಎಂದು ಬೆಂಗಳೂರಿನ ಸ್ಪೀನ್ ಸೇವಾ ಪ್ರತಿಷ್ಠಾನದ ನಾಮದೇವ ನಾಗರಾಜ ಹೇಳಿದರು.

ಗದಗ ಜಿಲ್ಲಾ ಸವಿತಾ ಸಮಾಜದಿಂದ ಹಮ್ಮಿಕೊಂಡಿದ್ದ ಪ್ರಶಸ್ತಿ ಪ್ರದಾನ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಇತ್ತೀಚೆಗೆ ಅಗ್ನಿ ಅವಘಡದಿಂದ ಬೆಟಗೇರಿಯ ಹನಮಂತಪ್ಪ ತಿಪ್ಪಣ್ಣ ರಾಂಪೂರ ಅವರ ಕ್ಷೌರದಂಗಡಿಗೆ ಹಾನಿಯಾಗಿತ್ತು. ಕೃಷ್ಣಾ ಹಡಪದ ಅವರ ಮನವಿಯಂತೆ ಸ್ಪೀನ್ ಸೇವಾ ಪ್ರತಿಷ್ಠಾನದಿಂದ 26 ಸಾವಿರ ರೂ ಮೊತ್ತದ ಅಂಗಡಿ ಪೀಠೋಪಕರಣ ಹಾಗೂ ಬಾಲಕೃಷ್ಣ ಅವರಿಂದ ಸಲೂನ್ ವೃತ್ತಿ ಕಿಟ್ ನೀಡಿ ನೆರವಾಗಿದ್ದು ಹೆಮ್ಮೆಯ ಸಂಗತಿ ಎಂದರು.

ರಾಜ್ಯ ಸವಿತಾ ಸಮಾಜದ ರಾಜ್ಯ ನಾಯಕರಾದ ಬೈಲಪ್ಪ ನಾರಾಯಣಸ್ವಾಮಿ ಮಾತನಾಡಿದರು. ಕಡೂರ ರವಿಕುಮಾರ, ದಾಸರಹಳ್ಳಿ ಚಂದ್ರು, ಶ್ರೀನಿವಾಸ ಕರಿ, ಅನಿಲಕುಮಾರ ಸಿದ್ದಮ್ಮನಹಳ್ಳಿ, ಅಬ್ದುಲ್ ಮುನಾಫ ಮುಲ್ಲಾ, ಬಾಬು ಬಾಕಳೆ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಬಸವರಾಜ ಮೆಣಸಿನಕಾಯಿ, ರಾಹುಲ್ ವಸಂತ ಸಿದ್ದಮ್ಮನಹಳ್ಳಿ, ಸವಿತಾ ಸಮಾಜದ ಹಿರಿಯರನ್ನು ಸನ್ಮಾನಿಸಲಾಯಿತು. ಕುರುಮಯ್ಯ ಬಾರಬಾರ ಸ್ವಾಗತಿಸಿದರು. ನವೀನ ಕೊಟೇಕಲ್ಲ ನಿರೂಪಿಸಿದರು.

ನಾಗರಾಜ ಆರೆಪಲ್ಲಿ ವಂದಿಸಿದರು ಎಂದು ಹನಮಂತಪ್ಪ ರಾಂಪೂರ, ಪರಶುರಾಮ ಕೊಟೇಕಲ್ಲ, ರಾಜು ಮಾನೆ, ವಿಕಾಸ ಕ್ಷೀರಸಾಗರ, ಅರುಣ ರಾಂಪೂರ, ರಮೇಶ ರಾಂಪೂರ, ಮಂಜುನಾಥ ಮಾನೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

## ಆಧುನಿಕ ಶಿಕ್ಷಣದ ತಾಯಿ ಸಾವಿತ್ರಿಬಾಯಿ



**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಸಾವಿತ್ರಿಬಾಯಿ ಪುಲೆ ಅವರನ್ನು ಆಧುನಿಕ ಶಿಕ್ಷಣದ ತಾಯಿ ಎಂದು ಕರೆಯಲಾಗುತ್ತದೆ ಎಂದು ಎಸ್.ಡಿ. ಪಂಡಿತ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡುಮಕ್ಕಳ ಶಾಲೆ ನಂ.1ರಲ್ಲಿ ಸಾವಿತ್ರಿ ಬಾಯಿ ಪುಲೆ ಅವರ ಜನ್ಮದಿನಾಚರಣೆ ನಿಮಿತ್ತ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿ, ದೇಶದ ಮೊದಲ ಮಹಿಳಾ ಶಿಕ್ಷಕಿ, ಅಕ್ಷರದ ಅವ್ವ ಸಾವಿತ್ರಿಬಾಯಿ ಪುಲೆ ಅವರು ಪ್ರತಿಯೊಬ್ಬ ಮಹಿಳೆ ಶಿಕ್ಷಣ ಪಡೆಯಬೇಕು, ಸಮಾಜದಲ್ಲಿರುವ ಅನಿಷ್ಠ ಪದ್ಧತಿಗಳು, ಬಾಲ್ಯ ವಿವಾಹ, ಸತಿ ಸಹಗಮನ ಹೋಗಲಾಡಿಸಲು ತಮ್ಮ ಸೇವೆ ಸಲ್ಲಿಸಿದವರು.

ಅವರ ಆದರ್ಶ ತತ್ವಗಳನ್ನು ನಾವೆಲ್ಲರೂ ರೂಢಿಸಿಕೋಳ್ಳಬೇಕು ಎಂದರು.

ಶಾಲಾ ಪ್ರಧಾನ ಗುರು ಪಿ.ಬಿ. ಕೆಂನಚನಗೌಡರ, ಎಂ.ಎಂ. ಮೇಗಲಮನಿ, ಕೆ.ಎಂ. ಹೆರಕಲ್ಲ, ಎಚ್.ಆರ್. ಭಜಂತ್ರಿ, ಎಸ್.ಎಚ್. ಉಪ್ಪಾರ, ಟಿ.ವೀಣಾ, ವೀಣಾ ಕಂಠಿ, ಎಸ್.ವಿ. ಹಿರೇಮಠ, ನಂದಾ ಮಟ್ಟಿ, ಜ್ಯೋತಿ ಜಾಧಾವ, ಪವಿತ್ರಾ ಮಟ್ಟಿ ಮುಂತಾದವರಿದ್ದರು.

---



**ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನ ವಿದ್ಯಾದಾನ ಸಮಿತಿ ಕ್ಲಾಸಿಕ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ದೇಶದ ಪ್ರಥಮ ಶಿಕ್ಷಕಿ, ಅಕ್ಷರದವ್ವ ಸಾವಿತ್ರಿ ಬಾಯಿ ಪುಲೆ ಅವರ ಜಯಂತಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಶಾಲೆಯ ಹಿರಿಯ ಶಿಕ್ಷಕಿ ರೇಣುಕಾ ವೆಂಕಟಾಪುರ ಸಾವಿತ್ರಿ ಬಾಯಿ ಪುಲೆ ಅವರ ಭಾವಚಿತ್ರಕ್ಕೆ ಹೂ ಮಾಲೆ ಅರ್ಪಿಸಿ, ಪೂಜೆ ಸಲ್ಲಿಸಿದರು. ಶಿಕ್ಷಕ ವೃಂದದವರು, ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

---


## ಫೆ. 29ರಿಂದ ಮಾರ್ಚ್ 7ರ ವರೆಗೆ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಫೆಬ್ರವರಿ 29ರಿಂದ ಮಾರ್ಚ್ 7ರ ವರೆಗೆ 15ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ನಡೆಸಲು ರಾಜ್ಯ ಸರ್ಕಾರ ನಿರ್ಧರಿಸಿದೆ.

ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಗೃಹ ಕಚೇರಿ ಕೃಷ್ಣದಲ್ಲಿ ನಡೆದ ಸಭೆಯಲ್ಲಿ 15ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ಉದ್ಘಾಟನಾ ದಿನಾಂಕ ಘೋಷಣೆ ಮಾಡಲಾಗಿದೆ.

ಫೆಬ್ರವರಿ 29 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚಲನಚಿತ್ರೋತ್ಸವಕ್ಕೆ ಚಾಲನೆ ನೀಡಲಿದ್ದು, ಮಾರ್ಚ್ 1 ರಿಂದ ಮಾರ್ಚ್ 7ರ ವರೆಗೆ ಸಿನಿಮಾಗಳ ಪ್ರದರ್ಶನ ನಡೆಯಲಿದೆ.



ಸಭೆ ಬಳಿಕ ಮಾತನಾಡಿದ ಸಿಎಂ, 'ನನ್ನ ಅಧ್ಯಕ್ಷತೆಯಲ್ಲಿ ಇಂದು ಅಂತಾರಾಷ್ಟ್ರೀಯ ಚಲನ ಚಿತ್ರೋತ್ಸವ ಸಂಘಟನಾ ಸಮಿತಿ ಸಭೆ ನಡೆದಿದೆ, ಫೆಬ್ರವರಿ 29 ರಿಂದ ಮಾರ್ಚ್ 7ವರೆಗೂ ಚಲನಚಿತ್ರೋತ್ಸವ ನಡೆಸಲು ತೀರ್ಮಾನ ಮಾಡಿದ್ದೇವೆ. ಇದು 15ನೇ ಆವೃತ್ತಿ ಆಗಿದೆ, ನಿಯಮದಂತೆ ಸಿಎಂ ಉದ್ಘಾಟನೆ ಮಾಡಲಿದ್ದಾರೆ, ದೇಶ ವಿದೇಶಗಳಲ್ಲಿ ಈ ಚಲನಚಿತ್ರೋತ್ಸವ ಮನ್ನಣೆ ಪಡೆದಿದೆ, ವಿಧಾನಸೌಧ ಮುಂಭಾಗ ಉದ್ಘಾಟನೆ ಮಾಡಲಾಗುತ್ತೆ, ಮಾರ್ಚ್ 7ನೇ ತಾರೀಖು ಸಮಾರೋಪ ಸಮಾರಂಭ ನಡೆಯುತ್ತೆ, ರಾಜ್ಯಪಾಲರು ಪ್ರಶಸ್ತಿಗಳನ್ನು ನೀಡುತ್ತಾರೆ. ಚಿತ್ರೋತ್ಸವ ಸಂಬಂಧ ಕೋರ್ ಕಮಿಟಿ ಮಾಡಿದ್ದೇವೆ. ವಿದೇಶದಿಂದ ಉತ್ತಮ ಚಿತ್ರಗಳನ್ನ ತರಿಸುತ್ತೇವೆ, ಕೋಮುವಾದ, ಸಮಾನತೆ, ಶಾಂತಿ ಸೌಹಾರ್ದತೆ ಬಗ್ಗೆ ಸಾರುವ ಚಿತ್ರಗಳ ಪ್ರದರ್ಶನ ನಡೆಯುತ್ತೆ' ಎಂದು ಮಾಹಿತಿ ನೀಡಿದರು.

## ಶ್ರೀ ಹುಲಿಗೆಮ್ಮದೇವಿ ಆರಾಧನೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸರ್ ಎಂ. ವಿಶ್ವೇಶ್ವರಯ್ಯ ರಸ್ತೆ, ತಳಗೇರಿ ಓಣಿಯಲ್ಲಿರುವ ಶ್ರೀ ಹುಲಿಗೆಮ್ಮದೇವಿ ದೇವಾಲಯದಲ್ಲಿ ಅರ್ಚಕರಾಗಿದ್ದ ದಿ.ಹನುಮಂತಪ್ಪ ಜಂಬಲದಿನ್ನಿ ಅವರ ಮನೆತನದ ಪೌರೋಹಿತ್ಯದಲ್ಲಿ 26ನೇ ವರ್ಷದ ಆರಾಧನಾ ಮಹೋತ್ಸವ ನೆರವೇರಲಿದೆ.

ಜ.4ರಂದು ಶ್ರೀ ಹುಲಿಗೆಮ್ಮದೇವಿ ಹಾಗೂ ಓಣಿಯಲ್ಲಿನ ಶಕ್ತಿದೇವತೆಯರಿಗೆ ಉಡಿ ತುಂಬುವ ಕಾರ್ಯಕ್ರಮ, ಜ.5ರಂದು ಅಮ್ಮನವರಿಗೆ ವಿಶೇಷ ಪೂಜೆ, ಮಧ್ಯಾಹ್ನ 12.30ಕ್ಕೆ ಸಮಾಜದ ಪಂಚರು, ಗುರು-ಹಿರಿಯರು, ಶ್ರೀ ವಿಜಯ ದುರ್ಗಾ ಯುವಕ ಸಂಘ, ಶ್ರೀ ನಿತ್ಯಾನಂದ ಯುವಕ ಸಂಘ, ಜೈ ಭೀಮ್ ಸೇನಾ ಸಂಘಟನೆ,



ಅಯ್ಯಪ್ಪಸ್ವಾಮಿ ಭಕ್ತ ಮಂಡಳಿ ಅವರ ಉಪಸ್ಥಿತಿಯಲ್ಲಿ ಅನ್ನ ಸಂತರ್ಪಣೆ ಜರುಗಲಿದೆ.

ಈ ಕಾರ್ಯಕ್ರಮಗಳಲ್ಲಿ ಭಕ್ತಾದಿಗಳು ಪಾಲ್ಗೊಂಡು ಜಗನ್ಮಾತೆಯ ಕೃಪೆಗೆ ಪಾತ್ರರಾಗಬೇಕೆಂದು ಸಂಘಟಿಕರ ಪರವಾಗಿ ಶಿವು ಜಂಬಲದಿನ್ನಿ, ಸಣ್ಣರಾಮಪ್ಪ ಬಳ್ಳಾರಿ ವಿನಂತಿಸಿದ್ದಾರೆ.

## ಅಪರಾಧ ಪ್ರಕರಣಗಳ ಸಂಖ್ಯೆಯಲ್ಲಿ ಏರಿಕೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನಗರದಲ್ಲಿ 2023 ರಲ್ಲಿ 22,331 ಅಪರಾಧ ಪ್ರಕರಣಗಳು ದಾಖಲಾಗಿದ್ದು, 2022ಕ್ಕೆ ಹೋಲಿಸಿದರೆ ಈ ಪ್ರಕರಣಗಳ ಸಂಖ್ಯೆಯಲ್ಲಿ ಹೆಚ್ಚಳವಾಗಿದೆ. 2022 ರಲ್ಲಿ ನಗರದಲ್ಲಿ 46,187 ಅಪರಾಧ ಪ್ರಕರಣಗಳು ದಾಖಲಾಗಿದ್ದವು.112 ಮತ್ತು ಇ-ಎಫ್ಐಆರ್ ಮೂಲಕ ಸ್ವೀಕರಿಸಿದ ಎಲ್ಲಾ ದೂರುಗಳನ್ನು ದಾಖಲಿಸಲು ನಗರದ ಎಲ್ಲಾ ಪೊಲೀಸ್ ಠಾಣೆಗಳಿಗೆ ರಾಜ್ಯ ಪೊಲೀಸ್ ಮುಖ್ಯಸ್ಥರ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

### ಸ್ವಯಂಭು ಸೋಮೇಶ್ವರ ಕ್ಷೇತ್ರದಲ್ಲಿ 5 ದಿನಗಳ ಕಾರ್ಯಕ್ರಮಕ್ಕೆ ರಂಭಾಪುರಿ ಶ್ರೀ ಚಾಲನೆ

# ಸತ್ಕಾರ್ಯಗಳಿಂದ ಜೀವನ ಸಮೃದ್ಧಿ

■ ವಿಜಯಸಾಕ್ಷಿ ಸುದ್ದಿ, ಕೊಲನಪಾಕ

ವೀರಶೈವ ಧರ್ಮದ ಮೂಲ ಪುರುಷರಾದ ಶ್ರೀ ಜಗದ್ಗುರು ರೇಣುಕಾಚಾರ್ಯರು ಅವತರಿಸಿದ ತೆಲಂಗಾಣ ರಾಜ್ಯದ ಭುವನಗಿರಿ ಯಾದಾದ್ರಿ ಜಿಲ್ಲೆ ಆಲೇರು ಮಂಡಲ ವ್ಯಾಪ್ತಿಯಲ್ಲಿ ಬರುವ ಕೊಲನಪಾಕ ಸ್ವಯಂಭು ಸೋಮೇಶ್ವರ ಕ್ಷೇತ್ರದಲ್ಲಿ ಬುಧವಾರದಿಂದ 5 ದಿನಗಳ ಕಾಲ ನಡೆಯಲಿರುವ ಕಾರ್ಯಕ್ರಮಕ್ಕೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ವಿದ್ಯುಕ್ತವಾಗಿ ಪೂಜೆ ಸಲ್ಲಿಸಿ ಚಾಲನೆಯಿತ್ತರು.

ಈ ಸಂದರ್ಭದಲ್ಲಿ ಆಶೀರ್ವಚನ ನೀಡಿದ ಶ್ರೀಗಳು, ಶಿವನ ಸದ್ಯೋಜಾತ ಮುಖದಿಂದ ಕೊಲ್ಲಿಪಾಕಿ ಶ್ರೀ ಸೋಮೇಶ್ವರ ಮಹಾಲಿಂಗದಿಂದ ಶ್ರೀ ಜಗದ್ಗುರು ರೇಣುಕಾಚಾರ್ಯರು ಅವತರಿಸಿದ ಪುಣ್ಯ ಪಾಲಿನ ಕ್ಷೇತ್ರವಿದು. ಶಿವಾದ್ವೈತ ತತ್ವ ಸಿದ್ಧಾಂತವನ್ನು ಭೂ ಮಂಡಲದಲ್ಲಿ ನೆಲೆಗೊಳಿಸಿ ಉದ್ಧರಿಸಿದ ಜಗನ್ಮಂಗಲ ಕ್ಷೇತ್ರವಿದು. ಪ್ರಾಚೀನ ಇತಿಹಾಸ ಮತ್ತು ಪರಂಪರೆಯುಳ್ಳ ಈ ಸ್ಥಾನದಲ್ಲಿ ಪ್ರತಿ ವರುಷ ಜನ್ಮ ದಿನದ ನಿಮಿತ್ಯ ಮಾಡಿ 5 ದಿನಗಳ ಕಾರ್ಯಕ್ರಮ ನಡೆಸಿಕೊಂಡು ಬರುತ್ತಿರುವುದು ನಮಗೆ ಸಂತೃಪ್ತಿ, ಸಂತೋಷ ತಂದಿದೆ ಎಂದರು.



ಮನುಷ್ಯ ಜೀವನದಲ್ಲಿ ಬೆಟ್ಟದಷ್ಟು ಸಂಪತ್ತು, ಸಂಪನ್ಮೂಲ ಹೊಂದಿದ್ದರೂ ಮಾನಸಿಕ ಶಾಂತಿ ನೆಮ್ಮದಿಯಿಲ್ಲ. ಮಹಿಮಾನ್ವಿತ, ಜಾಗೃತವಾದ ಈ ಕ್ಷೇತ್ರ ಸಂದರ್ಶನ ಮಾಡುವುದರಿಂದ ಮನುಷ್ಯನಿಗೆ ನೆಮ್ಮದಿ ದೊರಕುವುದರಲ್ಲಿ ಯಾವುದೇ ಅನುಮಾನವಿಲ್ಲ. ಶ್ರೀ ಜಗದ್ಗುರು ರೇಣುಕಾಚಾರ್ಯರ ಜ್ಞಾನ ಕ್ರಿಯಾತ್ಮಕವಾದ ಮತ್ತು ಸಾಮಾಜಿಕ ಚಿಂತನ ಧಾರೆಗಳು ಮನುಷ್ಯನ ಶ್ರೇಯೋಭಿವೃದ್ಧಿಗೆ ಸಹಕಾರಿಯಾಗಿವೆ. ಕಾಯಕ ದಾಸೋಹದ ಮೂಲಕ ಸಮಾಜದಲ್ಲಿ ಉತ್ಕರ್ಷತೆ ಉಂಟಾಗುವುದರಲ್ಲಿ ಅವರು ಕೊಟ್ಟ ಸಂದೇಶ, ತೋರಿದ ದಾರಿ ಸಕಲರ ಬಾಳಿನಲ್ಲಿ ಬೆಳಕು ಮೂಡಿಸಿವೆ ಎಂದರು.

ಕ್ಷೇತ್ರಾಭಿವೃದ್ಧಿ ಟ್ರಸ್ಟಿನ ಕಾರ್ಯದರ್ಶಿ ಅಣ್ಣಾರಾವ ಬಿರಾದಾರ, ಗುರುಪಾದಪ್ಪ ಕಿಣಗಿ, ಅರ್ಚಕ ಗಂಗಾಧರ, ಗಿರಿಯಪ್ಪ ಮುತ್ಯಾ ಮೊದಲಾದ ಗಣ್ಯರು ಉಪಸ್ಥಿತರಿದ್ದರು. ಸಿದ್ಧರಬೆಟ್ಟ ಕ್ಷೇತ್ರದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ನಿರೂಪಿಸಿದರು. ಪ್ರಾತಃಕಾಲ ಶ್ರೀ ಸೋಮೇಶ್ವರ ಮಹಾಲಿಂಗಕ್ಕೆ ರುದ್ರಾಭಿಷೇಕ, ಚಂಡಿಕಾಂಬಾ ದೇವಿಗೆ ಕುಂಕುಮಾರ್ಚನೆ ಜರುಗಿತು.

ಲೋಕಕಲ್ಯಾಣಕ್ಕಾಗಿ, ಜನರ ಶಾಂತಿ-ನೆಮ್ಮದಿ ಪ್ರಾಪ್ತಿಗಾಗಿ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜೆ ನೆರವೇರಿಸಿ ಶುಭ ಹಾರೈಸಿದರು. ಆಗಮಿಸಿದ ಭಕ್ತರಿಗೆ ಅನ್ನದಾಸೋಹ ನೆರವೇರಿತು.

ನೇತೃತ್ವ ವಹಿಸಿದ ಮೇಹಕರ ಹಿರೇಮಠದ ರಾಜೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಜೀವನೋತ್ಸಾಹ ಪ್ರಾಪ್ತಿಗಾಗಿ ಪುಣ್ಯ ಕ್ಷೇತ್ರಗಳ ದರ್ಶನ ಅವಶ್ಯಕ. ವಿಶ್ವ ಧರ್ಮದ ವಿಭು ಶ್ರೀ ಜಗದ್ಗುರು ರೇಣುಕಾಚಾರ್ಯರು ಶ್ರೀ ಸೋಮೇಶ್ವರ ಮಹಾಲಿಂಗದಿಂದ ಅವತರಿಸಿ ಭಕ್ತರಲ್ಲಿರುವ ಅಜ್ಞಾನ ಕಳೆದು ಜ್ಞಾನದ ಬೆಳಕು ತುಂಬಿದ್ದಾರೆ ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ಮಳಲಿ ಸಂಸ್ಥಾನ ಮಠದ ಡಾ. ನಾಗಭೂಷಣ ಶಿವಾಚಾರ್ಯ ಸ್ವಾಮಿಗಳು, ಭವಬಂಧನ ಬಿಡಿಸಿ ಶಿವಜ್ಞಾನ ತುಂಬಿ ಬದುಕನ್ನು ಬೆಳೆಸಲು ಗುರು ಮಾರ್ಗದರ್ಶನ ಅವಶ್ಯಕವಾಗಿದೆ ಎಂದರು.

## ಕಡ್ಡಾಯವಾಗಿ ಬೆಳೆ ಸಮೀಕ್ಷೆ ದಾಖಲಿಸಿ




■ ವಿಜಯಸಾಕ್ಷಿ ಸುದ್ದಿ, ಗದಗ

ಹಿಂಗಾರು ಹಂಗಾಮಿನ 2023-24ನೇ ಸಾಲಿನ ಬೆಳೆ ಸಮೀಕ್ಷೆ ಈಗಾಗಲೇ ಪ್ರಾರಂಭವಾಗಿದ್ದು, ಜಿಲ್ಲೆಯ ಎಲ್ಲಾ ರೈತರು ತಾವು ಬೆಳೆದ ಬೆಳೆಗಳ ವಿವರವನ್ನು ತಾವೇ ಸ್ವತಃ ತಮ್ಮ ಜಮೀನಿನಲ್ಲಿ ನಿಂತು ಗೂಗಲ್ ಪ್ಲೇಸ್ಟೋರ್‌ನಿಂದ ಹಿಂಗಾರು ರೈತರ ಬೆಳೆ ಸಮೀಕ್ಷೆ 2023ರನ್ನು ಡೌನ್‌ಲೋಡ್ ಮಾಡಿಕೊಂಡು ಬೆಳೆ ವಿವರವನ್ನು ಸೇರಿಸಿ ದಾಖಲಿಸಿ ಎಂದು ಕರ್ನಾಟಕ ರಾಜ್ಯ ರೈತ ಸಂಘ, ಹಸಿರು ಸೇನೆಯ ಗದಗ ಜಿಲ್ಲಾ ರೈತ ಸಂಘದ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ರೈತ ಬಾಂಧವರಲ್ಲಿ ವಿನಂತಿಸಿದ್ದಾರೆ.

ಬರ ಪರಿಹಾರ ಪಡೆಯಲು ಬೆಳೆ ಸಮೀಕ್ಷೆ ಕಡ್ಡಾಯವಾಗಿದ್ದು, ಸರ್ಕಾರದ ವಿವಿಧ ಯೋಜನೆಗಳನ್ನು ಪಡೆಯಲು ಕೂಡ ಈ ಸಮೀಕ್ಷೆ ಕಡ್ಡಾಯವಾಗಿದೆ.

ನಮ್ಮ ರೈತರು ಬೆಳೆಯ ವಿವರಗಳನ್ನು ಅಪ್ಲೋಡ್ ಮಾಡದಿದ್ದಲ್ಲಿ ಸರ್ಕಾರದ ಬರುವ ಯೋಜನೆಗಳ ಲಾಭದಿಂದ ವಂಚಿತರಾಗಿರುವ ಸಾಧ್ಯತೆಗಳಿವೆ ಎಂದು ಅವರು ತಿಳಿಸಿದ್ದಾರೆ.

## ಆನಂದಸ್ವಾಮಿ ಗಡ್ಡದೇವರಮಠರಿಗೆ ಅವಕಾಶ ನೀಡಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಾವೇರಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಪ್ರಬಲ ಟಿಕೆಟ್ ಆಕಾಂಕ್ಷಿ, ಪಕ್ಷದ ರಾಜ್ಯ ಪ್ರಧಾನ ಕಾರ್ಯದರ್ಶಿ ಆನಂದಸ್ವಾಮಿ ಜಿ.ಗಡ್ಡದೇವರಮಠ ಅವರಿಗೆ ಲೋಕಸಭಾ ಕ್ಷೇತ್ರದ ಟಿಕೆಟ್ ನೀಡಬೇಕೆಂದು ಹಾವೇರಿ ಲೋಕಸಭಾ ಕ್ಷೇತ್ರದ ಚುನಾವಣಾ ಉಸ್ತುವಾರಿ ಎಸ್.ಎಸ್. ಮಲ್ಲಿಕಾರ್ಜುನ ಅವರಿಗೆ ಬುಧವಾರ ಲಕ್ಷ್ಮೇಶ್ವರ ತಾಲೂಕಿನ ಕಾಂಗ್ರೆಸ್ ಮುಖಂಡರು ದಾವಣಗೇರಿಯಲ್ಲಿ ಮನವಿ ಸಲ್ಲಿಸಿದರು.

ಮನವಿ ಪತ್ರದಲ್ಲಿ, ಆನಂದಸ್ವಾಮಿ ಗಡ್ಡದೇವರಮಠ ಅವರು ವಿದ್ಯಾರ್ಥಿ ಜೀವನದಿಂದಲೇ ಕಾಂಗ್ರೆಸ್ ಯುವ ಘಟಕದ ನಾಯಕರಾಗಿ ಪಕ್ಷದ ಸಂಘಟನೆಯಲ್ಲಿ ತೊಡಗಿಸಿಕೊಂಡಿದ್ದಾರೆ.



ಸದ್ಯ ರಾಜ್ಯ ಕಾಂಗ್ರೆಸ್ ಪಕ್ಷದ ಪ್ರಧಾನ ಕಾರ್ಯದರ್ಶಿಯಾಗಿ, ಸಿಂಡಿಕೇಟ್ ಸೆನೆಟ್ ಸದಸ್ಯರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ಹಾವೇರಿ, ಗದಗ ಭಾಗದಲ್ಲಿನ ಶಾಸಕರು, ಮಾಜಿ ಶಾಸಕರು, ವಿ.ಪ ಸದಸ್ಯರು, ಸ್ಥಳೀಯ ಆಡಳಿತ ಮಂಡಳಿಯ ಸದಸ್ಯರು, ಯುವಕರು ಇವರ ಬಗ್ಗೆ ಅಪಾರವಾದ ಪ್ರೀತಿ-ವಿಶ್ವಾಸ ಹೊಂದಿದ್ದಾರೆ.

ಈ ಬಾರಿ ಇವರಿಗೆ ಟಿಕೆಟ್ ನೀಡಿದರೆ ಗೆಲುವು ಖಚಿತ ಎಂಬ ಮಾತುಗಳು ಎಲ್ಲೆಡೆ ಕೇಳಿಬರುತ್ತಿವೆ. ಹೀಗಾಗಿ, ಆನಂದಸ್ವಾಮಿ ಗಡ್ಡದೇವರಮಠ ಅವರ ಸ್ಪರ್ಧೆಗೆ ಅವಕಾಶ ಕಲ್ಪಿಸಿಕೊಡಬೇಕು. ಟಿಕೆಟ್ ನೀಡಿದರೆ ಪಕ್ಷಾತೀತವಾಗಿ ಅವರ ಗೆಲುವಿಗೆ ಎಲ್ಲರೂ ಸಹಕರಿಸುತ್ತಾರೆ ಎಂದು ಮನವಿ ಸಲ್ಲಿಸಿದ್ದು, ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆನ್ನಲಾಗಿದೆ.

ಈ ವೇಳೆ ರಾಜೀವ್ ಗಾಂಧಿ ಪಂಚಾಯತರಾಜ್ ಸಂಘಟನೆಯ ತಾಲೂಕಾಧ್ಯಕ್ಷ ಫಕ್ಕಿರೇಶ ಮಾಟಣ್ಣವರ, ಪುರಸಭೆ ಮಾಜಿ ಸದಸ್ಯ ತಿಪ್ಪಣ್ಣ ಸಂಶಿ, ನಾಗರಾಜ ಮಡಿವಾಳರ, ಬಸವರಾಜ ಬೆಟಗೇರಿ, ಶಿವಣ್ಣ ಕಬ್ಬೇರ, ಜಗದೀಶ ಹುಲಿಗೆಮ್ಮನವರ, ಬಸವರಾಜ ಗೂಳಣ್ಣವರ, ಸಿದ್ದಲಿಂಗೇಶ ಮರಳಿಹಳ್ಳಿ ಮತ್ತಿತರರಿದ್ದರು.

## ಶಾಲೆಯ ವಿದ್ಯಾರ್ಥಿಗಳು ದೇಶದ ರತ್ನಗಳಾಗಲಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸ್ಕೂಲ್ ಚಂದನದಿಂದ ಭಾರತರತ್ನ ಪ್ರೊ. ಸಿ.ಎನ್.ಆರ್. ರಾವ್ ಅವರಿಗೆ ಬೆಂಗಳೂರಿನ ಜವಹರಲಾಲ್ ನೆಹರು ಉನ್ನತ ಸಂಶೋಧನಾ ಸಂಸ್ಥೆಯಲ್ಲಿ 'ಚಂದನ ರತ್ನ' ಗೌರವ ಪುರಸ್ಕಾರ ನೀಡಿ ಸನ್ಮಾನಿಸಲಾಯಿತು.

ಈ ವೇಳೆ ಮಾತನಾಡಿದ ಸಿಎನ್‌ಆರ್ ರಾವ್, ತಮಗೆ ಭಾರತರತ್ನ ಸೇರಿ ವಿಶ್ವದಾದ್ಯಂತ ನೂರಾರು ಪ್ರಶಸ್ತಿಗಳು ಬಂದಿದ್ದರೂ ಚಂದನ ಶಾಲೆಯ ವಿದ್ಯಾರ್ಥಿಗಳು ನೀಡಿದ ಪ್ರಶಸ್ತಿ, ಗೌರವ ಪುರಸ್ಕಾರ ಅತ್ಯಂತ ಖುಷಿ ನೀಡುತ್ತದೆ. ತವರುಮನೆಯಂತಿರುವ ಚಂದನ ಶಾಲೆಯ ಉಡುಗೊರೆ ನಮಗೆ ಅತ್ಯಂತ ಪ್ರೀತಿದಾಯಕವಾಗಿದೆ. ಗ್ರಾಮೀಣ ಭಾಗದಲ್ಲಿ ವಿಜ್ಞಾನದ ಮಿಂಚು-ಸಂಚು ಹರಿಸಿದ ಶಾಲೆಯ ವಿದ್ಯಾರ್ಥಿಗಳು ದೇಶದ ರತ್ನಗಳಾಗಲಿ ಎಂದು ಶುಭ ಕೋರಿದರು.

ಡಾ. ಇಂದುಮತಿ ಸಿಎನ್‌ಆರ್ ರಾವ್, ಇಸ್ರೋ ಮಾಜಿ ಅಧ್ಯಕ್ಷ ಡಾ. ಎ.ಎಸ್. ಕಿರಣಕುಮಾರ, ಜೆಎನ್‌ಸಿಎಎಸ್‌ಆರ್‌ನ ಅಧ್ಯಕ್ಷ ಪ್ರೊ. ಜಿ.ಯು. ಕುಲಕರ್ಣಿ, ಶಾಲೆಯ ಸಂಸ್ಥಾಪಕ ಟಿ.ಈಶ್ವರ ದಂಪತಿ, ವಿಜ್ಞಾನಿಗಳಾದ ಪ್ರೊ. ಕೆ.ಎನ್. ಗಣೇಶ, ಸುಚಿತ್ರಾ, ವಿದ್ಯಾರ್ಥಿಗಳಾದ ವರ್ಷಾ, ವಚನಾ, ಪೃಥ್ವಿ, ಪ್ರಿಯಾಂಕ ಇದ್ದರು.

## ನಾಳೆ ಸಭಾಭವನ ಉದ್ಘಾಟನೆ, ಪ್ರಶಸ್ತಿ ಪ್ರದಾನ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಇಲ್ಲಿನ ಬಿ.ಸಿ. ಬಂಗಾರಿ ಪ್ರಾಥಮಿಕ ಶಾಲೆಯಲ್ಲಿ ನಿರ್ಮಾಣವಾದ ಸಭಾಭವನ ಉದ್ಘಾಟನೆ ಹಾಗೂ ದಿ ಸಿ.ಬಿ. ಬಡ್ನಿ ಅವರ 80ನೇ ಜನ್ಮದಿನಾಚರಣೆ ನಿಮಿತ್ತ 'ಸಮಾಜಮುಖಿ ಕಾಯಕ ಯೋಗಿ' ಪ್ರಶಸ್ತಿ ಪ್ರದಾನ ಸಮಾರಂಭ ಹಾಗೂ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ1ರಲ್ಲಿ ದಿ ಸಿ.ಬಿ. ಬಡ್ನಿ ಅವರ ಸವಿನೆನಪಿಗಾಗಿ ನಿರ್ಮಾಣವಾದ ಸರಸ್ವತಿ ಪ್ರತಿಮೆ ಅನಾವರಣ ಕಾರ್ಯಕ್ರಮವನ್ನು ಜ. 5ರ ಬೆಳಿಗ್ಗೆ 10.30ಕ್ಕೆ ಆಯೋಜಿಸಲಾಗಿದೆ.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಗವಿಮಠದ ಡಾ.ಮಲ್ಲಿಕಾರ್ಜುನ ಮಹಾ ಸ್ವಾಮಿಗಳು, ನೇತೃತ್ವವನ್ನು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗದೇವರು, ಅಧ್ಯಕ್ಷತೆಯನ್ನು ಎಂ.ಡಿ. ಬಟ್ಟೂರ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಎಸ್.ಎಂ. ನೀಲಗುಂದ, ಎಂ.ಎ. ರೆಡ್ಡೇರ, ಗೌರವ್ವಾ ಬಡ್ನಿ, ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ, ಪ್ರಶಸ್ತಿ ಪುರಸ್ಕೃತರಾದ ಎಂ.ಪಿ. ಮೆಣಸಿನಕಾಯಿ, ಐ.ಪಿ. ಮೆಣಸಿನಕಾಯಿ, ಬಾಲಲೀಲಾ ಮಹಾಂತ ಶಿವಯೋಗಿ ಶಿಕ್ಷಣ ಸಮಿತಿ ಕಾರ್ಯದರ್ಶಿ ಡಾ. ಎಸ್.ಸಿ. ಚವಡಿ, ಪಿ.ಎ. ವಂಟಕರ್, ಪ.ಪಂ ಸದಸ್ಯ ಎಸ್.ಸಿ. ಬಡ್ನಿ ಬಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

## ಮಕ್ಕಳಿಗೆ ಹೆಚ್ಚು ಅಂಕ ಗಳಿಕೆಗೆ ಒತ್ತಾಯಿಸದೇ ಅಭ್ಯಾಸದತ್ತ ಪ್ರೇರೇಪಿಸಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಕ್ಕಳು ಉತ್ತಮ ಶಿಕ್ಷಣದ ಮೂಲಕ ಹೆತ್ತವರು ಮತ್ತು ಶಿಕ್ಷಕರಿಗೆ ಗೌರವ ತರುವ ಸಂಕಲ್ಪದೊಂದಿಗೆ ಮುನ್ನಡೆಯಬೇಕು ಎಂದು ಸಾಹಿತಿ ಕೆ.ಎ. ಬಳಿಗೇರ ಹೇಳಿದರು.

ಅವರು ಮಂಗಳವಾರ ಪಟ್ಟಣದ ಪಿಎಸ್‌ಬಿಡಿ ಬಾಲಕಿಯರ ಪ್ರೌಢಶಾಲೆಯಲ್ಲಿ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗಾಗಿ ಕೈಗೊಂಡ ಕಾರ್ಯಾಗಾರದ ನಿಮಿತ್ತ ತಾಯಂದಿರ ಪಾದಪೂಜೆ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ಮಕ್ಕಳ ಶೈಕ್ಷಣಿಕ ಪ್ರಗತಿಯಲ್ಲಿ ತಾಯಂದಿರು ಮತ್ತು ಶಿಕ್ಷಕರ ಪಾತ್ರ ಮಹತ್ವದ್ದಾಗಿದೆ. ಹೆಚ್ಚು ಅಂಕಗಳಿಗೆ ಒತ್ತಾಯಿಸದೇ ಅಭ್ಯಾಸದತ್ತ ಪ್ರೇರೇಪಿಸಬೇಕು. ಓದು-ಬರಹದ ಜತೆಗೆ ಸಂಸ್ಕಾರ ನೀಡುವುದು ಮುಖ್ಯವಾಗಿದೆ.


ಈ ನಿಟ್ಟಿನಲ್ಲಿ ಶ್ರೀ ತಾಯಿ ಪಾರ್ವತಿ ಮಕ್ಕಳ ಬಳಗವು ವಿದ್ಯಾರ್ಥಿಗಳಿಂದ ತಾಯಂದಿರ ಪಾದಪೂಜೆ ಮಾಡಿಸಿ, ಉಡಿ ತುಂಬಿ, ತಾಯಿ-ಮಕ್ಕಳಿಗೆ ಒಂದೇ ತಟ್ಟೆಯಲ್ಲಿ ಊಟ ಮಾಡಿಸಿದ್ದು ಹೃದಯ ಸ್ಪರ್ಶಿಯಾಗಿದೆ. ತಂದೆ-ತಾಯಿ, ಗುರುಗಳ ಶುಭ ಹಾರೈಕೆ ಮಕ್ಕಳ ಏಳಿಗೆಗೆ ಕಾರಣವಾಗುತ್ತದೆ ಎಂದರು.

ಸಂಸ್ಥೆಯ ಮುಖ್ಯಸ್ಥರಾದ ಜಯಲಕ್ಷ್ಮೀ ಗಡ್ಡದ್ದೇವರಮಠ ಮಾತನಾಡಿ, ತಾಯಂದಿರು ಮಕ್ಕಳಿಗೆ ಒತ್ತಾಯ ಮಾಡಿ ಅಭ್ಯಾಸದಲ್ಲಿ ತೊಡಗಿಸಿ ತಾವು ಮೊಬೈಲ್, ಟಿವಿ ನೋಡುತ್ತಾ ಕುಳಿತುಕೊಳ್ಳದೆ ತಾವು ಅವರ ಹತ್ತಿರ ಕುಳಿತು ಓದಲು ಪ್ರೋತ್ಸಾಹ ನೀಡಿ, ಹುರಿದುಂಬಿಸುವ ಕೆಲಸ ಮಾಡಬೇಕು ಎಂದರು.

ಮುಖ್ಯೋಪಾಧ್ಯಾಯ ಜೆ.ಡಿ. ಲಮಾಣಿ, ಶಾರದಕ್ಕ ಮಹಾಂತಶೆಟ್ಟರ, ಎಂ.ಸಿದ್ದಲಿಂಗಯ್ಯ, ನಿರ್ಮಲಾ ಗೌರಿ, ಎಂ.ಸಿ. ಹಿರೇಮಠ, ಕಾವ್ಯಾ ದೇಸಾಯಿ, ಶ್ವೇತಾ ಅಂಬಲಿ ಮತ್ತಿತರರಿದ್ದರು. ಪಿ.ಎಲ್. ಪಾಟೀಲ, ಶೀಲಾ ತಳವಾರ, ಆರ್.ಸಿ. ಉಮಚಗಿ ನಿರೂಪಿಸಿದರು.

### ನಿಧನ ವಾರ್ತೆ

**ಉಮೇಶ ಬಡಿಗೇರ**



ಲಕ್ಕುಂಡಿ, ಇಲ್ಲಿಯ ಪತ್ತಾರ ಓಣಿಯ ನಿವಾಸಿ ಉಮೇಶ ಯಚ್ಚರಪ್ಪ ಬಡಿಗೇರ (51) ಬುಧವಾರ ನಿಧನರಾದರು.

ಮೃತರು ಪತ್ನಿ, ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

**ಯಲ್ಲಮ್ಮ ಸಿದ್ದಪ್ಪ ಕಣವಿ**



ಲಕ್ಷ್ಮೇಶ್ವರ, ತಾಲೂಕಿನ ಗೊಜನೂರ ಗ್ರಾಮದ ಹಿರಿಯರಾದ ಯಲ್ಲಮ್ಮ ಸಿದ್ದಪ್ಪ ಕಣವಿ (86) ಇವರು ಬುಧವಾರ ನಿಧನರಾದರು. ಮೃತರಿಗೆ ಪುತ್ರ, 7 ಜನ ಪುತ್ರಿಯರು ಸೇರಿದಂತೆ ಅಪಾರ ಬಂಧು-ಬಳಗವಿದೆ.

## ಎಲ್.ಪಿ. ಜಗದೀಶ ಅಗಲಿಕೆಗೆ ರಂಭಾಪುರಿ ಶ್ರೀಗಳ ಸಂತಾಪ

■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಬಾಳೆಹೊನ್ನೂರಿನ ಪತ್ರಕರ್ತ, ಛಾಯಾಗ್ರಾಹಕ ಎಲ್.ಪಿ. ಜಗದೀಶ ಅಗಲಿಕೆಗೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ತಮ್ಮ ಸಂತಾಪ ವ್ಯಕ್ತಪಡಿಸಿದ್ದಾರೆ.

ಸದಾ ಲವಲವಿಕೆಯಿಂದ, ಕ್ರಿಯಾಶೀಲರಾಗಿ ಇರುತ್ತಿದ್ದ ಎಲ್.ಪಿ. ಜಗದೀಶ ಪತ್ರಕರ್ತರಲ್ಲದೇ ಉತ್ತಮ ಛಾಯಾಗ್ರಾಹಕರಾಗಿದ್ದರು. ಶ್ರೀ



ಪೀಠದೊಡನೆ ಮಧುರ ಸಂಬಂಧ ಹೊಂದಿದ್ದ ಅವರ ಅಗಲಿಕೆ ನೋವನ್ನುಂಟು ಮಾಡಿದೆ.

ಮೃತರ ಪವಿತ್ರ ಆತ್ಮಕ್ಕೆ ದಯಾಘನನಾದ ಪರಮಾತ್ಮನು ಚಿರಶಾಂತಿ ನೀಡಲಿ. ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗದವರಿಗೆ ನೀಡಲಿ ಎಂದು ಶ್ರೀ ರಂಭಾಪುರಿ ಜಗದ್ಗುರುಗಳು ತಮ್ಮ ಸಂತಾಪ ಸಂದೇಶದಲ್ಲಿ ತಿಳಿಸಿದ್ದಾರೆ.

## ಕೊರೋನಾದಿಂದ ಒಬ್ಬರು ಸಾವು, 260 ಮಂದಿಗೆ ಪಾಸಿಟಿವ್

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದಲ್ಲಿ ಕೋವಿಡ್-19 ಪ್ರಕರಣಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಬುಧವಾರ ಕೊರೋನಾದಿಂದ ಒಬ್ಬರು ಮೃತಪಟ್ಟಿದ್ದಾರೆ ಮತ್ತು 260 ಮಂದಿಗೆ ಪಾಸಿಟಿವ್ ದೃಢಪಟ್ಟಿದೆ. ಇದರೊಂದಿಗೆ ರಾಜ್ಯದಲ್ಲಿ ಸಕ್ರಿಯ ಪ್ರಕರಣಗಳ ಸಂಖ್ಯೆ 1175ಕ್ಕೆ ಏರಿಕೆಯಾಗಿದೆ.

ರಾಜ್ಯದಲ್ಲಿ ಕಳೆದ 24 ಗಂಟೆಗಳಲ್ಲಿ 260 ಮಂದಿಗೆ ಕೋವಿಡ್-19 ಪಾಸಿಟಿವ್ ದೃಢಪಟ್ಟಿದೆ. ಸೋಂಕಿನಿಂದ ಕೊಪ್ಪಳ ಜಿಲ್ಲೆಯಲ್ಲಿ ಒಬ್ಬರು ಮೃತಪಟ್ಟಿದ್ದು, ಒಟ್ಟು ಸಕ್ರಿಯ ಪ್ರಕರಣಗಳ ಸಂಖ್ಯೆ 1,175ಕ್ಕೆ ಏರಿಕೆಯಾಗಿದೆ.

ಬುಧವಾರ ಕೋವಿಡ್ ನಿಂದ 228 ಮಂದಿ ಗುಣಮುಖರಾಗಿ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದಾರೆ. ಕಳೆದ 24 ಗಂಟೆಗಳಲ್ಲಿ 7,497 ಮಂದಿಗೆ ಕೊರೋನಾ ಟೆಸ್ಟ್ ಮಾಡಲಾಗಿದೆ.

# ಸಾವಿತ್ರಿಬಾಯಿ ಫುಲೆ ಆಧುನಿಕ ಶಿಕ್ಷಣದ ತಾಯಿ



■ವಿಜಯಸಾಕ್ಷಿ ಸುದ್ದಿ, ಗದಗ

ಬಾಲಕಿಯರಿಗಾಗಿ ಶಾಲೆಯನ್ನು ತೆರೆದ ಭಾರತದ ಮೊದಲ ಮಹಿಳಾ ಶಿಕ್ಷಕಿ, ಆಧುನಿಕ ಶಿಕ್ಷಣದ ತಾಯಿ ಎಂದೇ ಕರೆಯಲ್ಪಡುವ ಸಾವಿತ್ರಿಬಾಯಿ ಫುಲೆ ಅವರು ಎರಡು ಶತಮಾನಗಳ ಹಿಂದೆ ಸಮುದಾಯಗಳಿಗೆ ಆಧುನಿಕ ಶಿಕ್ಷಣ ನೀಡಿ ಮಹಿಳೆಯರ ಸಾಕ್ಷರತೆಗೆ ಅವಿಸ್ಮರಣೀಯ ಕೊಡುಗೆ ನೀಡಿದ್ದಾರೆ ಎಂದು ಮುಖ್ಯ ಶಿಕ್ಷಕ ಮಲ್ಲೇಶ ಡಿ.ಎಚ್. ಹೇಳಿದರು.

ಅವರು ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಅಡವಿಸೋಮಾಪೂರ ಸಣ್ಣ ತಾಂಡೆ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಸಾವಿತ್ರಿಬಾಯಿ ಫುಲೆ ಅವರ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿ, ಸಾಮಾಜಿಕ ವ್ಯವಸ್ಥೆಯಲ್ಲಿ ತುಂಬಿಕೊಂಡಿದ್ದ ಮೂಢನಂಬಿಕೆ, ಕಂದಾಚಾರಗಳಿಂದ ಮನನೊಂದು, ಹೆಣ್ಣು ಮಕ್ಕಳಿಗೆ ಶಿಕ್ಷಣ ಪ್ರಾರಂಭಿಸಿದರು. ಸಮಾಜದ ದುರವಸ್ಥೆಯನ್ನು ಸರಿಪಡಿಸಲು ದೃಢಸಂಕಲ್ಪ ತೊಟ್ಟು ಸಮಾಜ ಸುಧಾರಣೆಗೆ ಮುನ್ನುಡಿ ಬರೆದ ಸಾವಿತ್ರಿಬಾಯಿ ಫುಲೆ ನಮಗೆಲ್ಲ ಅಕ್ಷರದವ್ವ ಎಂದರು.

ಶಿಕ್ಷಕ ಎಸ್.ಜಿ. ಅಮ್ಮಿನಭಾವಿ ಸಾವಿತ್ರಿಬಾಯಿ ಫುಲೆ ಅವರ ಜೀವನ, ಸಾಮಾಜಿಕ ಸಂಘರ್ಷ, ಹೋರಾಟದ ಕುರಿತು ಮಾತನಾಡಿದರು. ಶಿಕ್ಷಕಿಯರಾದ ಎಸ್.ಟಿ. ಹಳಕಟ್ಟಿ, ಪಿ.ಬಿ. ಕಿಲಬನವರ, ಶಾಲಾ ಮೇಲುಸ್ತುವಾರಿ ಸಮಿತಿ ಅಧ್ಯಕ್ಷ ಮಾರುತಿ ಪವಾರ, ಗಂಗವ್ವ ಲಮಾಣಿ, ಸಾವಿತ್ರಿ ರಾಠೋಡ, ದೇವಕ್ಕ ಲಮಾಣಿ, ಸಕ್ಕುಬಾಯಿ ಲಮಾಣಿ, ಸರೋಜಾ ಲಮಾಣಿ ಸೇರಿದಂತೆ ಶಾಲಾ ಮಕ್ಕಳು ಇದ್ದರು.

**'ಸಾರ್ಥವಾಹ-2024' ವಿಶೇಷ ಕಾರ್ಯಕ್ರಮ ಉದ್ಘಾಟಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ**

# ವಿವಿಧತೆಯಲ್ಲಿ ಏಕತೆಯೇ ಭಾರತದ ಶಕ್ತಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಯುವಜನರು ಭವ್ಯ ಭಾರತದ ಭವಿಷ್ಯ ಮತ್ತು ಅಭಿವೃದ್ಧಿಯ ಪ್ರಮುಖ ಅಂಶವಾಗಿದ್ದಾರೆ. ಇಂದಿನ ಯುವ ಸಮುದಾಯವೇ ಭಾರತ ವಿಶ್ವಗುರು ಎಂದು ಗುರುತಿಸಿಕೊಳ್ಳಲು ಕಾರಣವಾಗಿದೆ ಎಂದು ರಾಜ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ, ಅಂಗವಿಕಲರು ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಅಭಿಪ್ರಾಯಪಟ್ಟರು.

ಅವರು ಬುಧವಾರ ಬೆಳಿಗ್ಗೆ ಇಲ್ಲಿನ ಕರ್ನಾಟಕ ಕಾಲೇಜಿನ ಸೃಜನಾ ರಂಗಮಂದಿರದಲ್ಲಿ ಕರ್ನಾಟಕ ಕಲಾ ಮಹಾವಿದ್ಯಾಲಯದ ಪ್ರವಾಸೋದ್ಯಮ ಅಧ್ಯಯನ ವಿಭಾಗ ಹಾಗೂ ಕೇಂದ್ರ ಪವಾಸೋದ್ಯಮ ಇಲಾಖೆಯಿಂದ ಆಯೋಜಿಸಿರುವ ಮೂರು ದಿನಗಳ ಸಾಂಸ್ಕೃತಿಕ ಉತ್ಸವ- ಸಾರ್ಥವಾಹ-2024 ವಿಶೇಷ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.




ವಿವಿಧತೆಯಲ್ಲಿ ಏಕತೆ ಸಾಧಿಸಿರುವುದೇ ಭಾರತದ ಶಕ್ತಿ. ಸ್ವಾತಂತ್ರ್ಯ ಬಂದ 75 ವರ್ಷಗಳಲ್ಲಿ ಭಾರತ ಗಮನಾರ್ಹ ಪ್ರಗತಿ ಸಾಧಿಸಿದೆ. ಸ್ವಾವಲಂಬನೆಯತ್ತ ರಾಷ್ಟ್ರವು ಸಾಗುತ್ತಿದೆ. ಭಾರತವನ್ನು ಅಭಿವೃದ್ಧಿ ಹೊಂದಿದ ದೇಶವನ್ನಾಗಿಸಲು ಹಾಗೂ ದೇಶವನ್ನು ವಿಶ್ವದ ಅತ್ಯುತ್ತಮ ಸ್ಥಾನದಲ್ಲಿ ಇರಿಸಲು ಪ್ರತಿಯೊಬ್ಬರ ಸಹಕಾರ ಅಗತ್ಯವಿದೆ. ಭಾರತವು ವಿಶಿಷ್ಟ ಸಂಸ್ಕೃತಿಗಳಿಂದ ಕೂಡಿದ ವೈವಿಧ್ಯಮಯ ದೇಶವಾಗಿದೆ ಮತ್ತು ವಿವಿಧತೆಯಲ್ಲಿ ಏಕತೆ ಈ ರಾಷ್ಟ್ರದ ಶಕ್ತಿಯಾಗಿ ಉಳಿದಿದೆ ಎಂದು ಅವರು ಹೇಳಿದರು.

> ಇದೇ ಸಂದರ್ಭದಲ್ಲಿ ಸಚಿವರು ಕರ್ನಾಟಕ ಕಲಾ ಮಹಾವಿದ್ಯಾಲಯದಲ್ಲಿ ಚಿತ್ತಾರ ಕಲಾ ಬಳಗವು ಏರ್ಪಡಿಸಿದ್ದ ಮೂರು ದಿನಗಳ ಚಿತ್ರ ಕಲಾ ಪ್ರದರ್ಶನವನ್ನು ಉದ್ಘಾಟಿಸಿ, ಕಲಾ ಕೃತಿಗಳನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

ಜೀವನದಲ್ಲಿ ಸೋಲು-ಗೆಲುವುಗಳನ್ನು ಸಮಾನವಾಗಿ ಸ್ವೀಕರಿಸಿ. ಸೋಲು-ಗೆಲುವು ಎಲ್ಲವೂ ಸಾಮಾನ್ಯ. ಆತ್ಮವಿಶ್ವಾಸ, ಛಲ ನಿಮ್ಮಲ್ಲಿದ್ದರೆ ಅಸಾಧ್ಯವಾದುದ್ದನ್ನು ಕೂಡ ಸಾಧಿಸಿ ತೋರಿಸಬಹುದು ಎಂದು ಸಚಿವರು ಹೇಳಿದರು.

ಖ್ಯಾತ ನಟ, ನಿರ್ದೇಶಕ ಡಾ.ಯಶವಂತ ಸರದೇಶಪಾಂಡೆ ಸಾಂದರ್ಭಿಕವಾಗಿ ಮಾತನಾಡಿದರು. ಕರ್ನಾಟಕ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಕೆ.ಬಿ. ಗುಡಸಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಕರ್ನಾಟಕ ಕಲಾ ಕಾಲೇಜಿನ ಪ್ರಭಾರ ಪ್ರಾಚಾರ್ಯೆ ಡಾ. ಮಂಜುಳಾ ಚಲವಾದಿ, ಕರ್ನಾಟಕ ವಿಜ್ಞಾನ ಕಾಲೇಜಿನ ಪ್ರಾಚಾರ್ಯ ಡಾ. ಮಂಜುಲಿ ಸಾಳುಂಕೆ, ಪ್ರವಾಸೋದ್ಯಮ ವಿಭಾಗದ ಸಂಯೋಜಕ ಡಾ. ಕೆ. ಜಗದೀಶ್, ವಿದ್ಯಾರ್ಥಿ ಕಲ್ಯಾಣ ಅಧಿಕಾರಿ ಡಾ. ವೀರೇಂದ್ರ ಯಾದವ, ವಿಶ್ರಾಂತ ಪ್ರಾಧ್ಯಾಪಕ ಪ್ರೊ. ಎಸ್.ರಾಜಶೇಖರ ಮತ್ತಿತರ ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಜಿಲ್ಲಾ ಮಟ್ಟದ ಭಾಷಣ ಸ್ಪರ್ಧೆ

■ವಿಜಯಸಾಕ್ಷಿ ಸುದ್ದಿ, ಗದಗ

ನೆಹರು ಯುವ ಕೇಂದ್ರ ಗದಗ, ಕೆಎಲ್ಇ ಸಂಸ್ಥೆಯ ಜ. ತೋಂಟದಾರ್ಯ ಮಹಾವಿದ್ಯಾಲಯ ಮತ್ತು ಇನ್ಸ್ಟಿಟ್ಯೂಷನ್ ಇನೋವೇಶನ್ ಕೌನ್ಸಿಲ್ ಇವರ ಸಂಯುಕ್ತ ಆಶ್ರಯದಲ್ಲಿ ಜ. 9ರಂದು ಜೆ.ಟಿ. ಮಹಾವಿದ್ಯಾಲಯದಲ್ಲಿ ಜಿಲ್ಲಾ ಮಟ್ಟದದ ಭಾಷಣ ಸ್ಪರ್ಧೆಯನ್ನು ಆಯೋಜಿಸಲಾಗಿದೆ

ಭಾಷಣದ ವಿಷಯ 'ಮೈ ಭಾರತ್ ವಿಕಸಿತ ಭಾರತ್@2047' ಆಗಿದ್ದು, 15ರಿಂದ 29 ವಯೋಮಾನದವರು ಸ್ಪರ್ಧೆಯಲ್ಲಿ ಭಾಗವಹಿಸಬಹುದು. ಭಾಗವಹಿಸುವ ಸ್ಪರ್ಧಿಗಳಿಗೆ ಇಲಾಖೆಯ ವತಿಯಿಂದ ಪ್ರಮಾಣಪತ್ರವನ್ನು ನೀಡಲಾಗುವದು.

ಪ್ರಥಮ ಸ್ಥಾನ ಪಡೆದವರು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಲಿದ್ದು, ರಾಜ್ಯ ಮಟ್ಟದಲ್ಲಿ ಪ್ರಥಮ ಸ್ಥಾನಕ್ಕೆ 1 ಲಕ್ಷ ರೂ. ನಗದು ಬಹುಮಾನ, ದ್ವಿತೀಯ ಸ್ಥಾನ 50 ಸಾವಿರ ರೂ ಮತ್ತು ತೃತೀಯ ಸ್ಥಾನ ಪಡೆಯುವ ಇಬ್ಬರಿಗೆ ತಲಾ 25 ಸಾವಿರ ರೂ ನಗದು ಬಹುಮಾನ ನೀಡಲಾಗುತ್ತದೆ.

ಹೆಚ್ಚಿನ ವಿವರಗಳಿಗೆ ನೆಹರು ಯುವ ಕೇಂದ್ರದ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

**ಸುವಿಧಾ ಪತ್ತಿನ ಸೌಹಾರ್ದ ಸಹಕಾರಿ ಸಂಘದ ಕ್ಯಾಲೆಂಡರ್ ಬಿಡುಗಡೆಗೊಳಿಸಿದ ಸಿಪಿಐ ಪಾಟೀಲ**

# ಸಮಾಜ ಸುಧಾರಣೆಯಲ್ಲಿ ಸರ್ವರ ಸಹಕಾರ ಅಗತ್ಯ



■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನಲ್ಲಿ ಥರ್ಡ್ ಐ ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸುತ್ತಿದ್ದು, ಸಾರ್ವಜನಿಕರಿಂದ ಉತ್ತಮ ಸ್ಪಂದನೆ ದೊರೆತಿದೆ. ಸಿಸಿ ಕೆಮರಾಗಳ ಕಣ್ಗಾವಲಿನಿಂದಾಗಿ ಅಪರಾಧಗಳ ಸಂಖ್ಯೆಯೂ ಇಳಿಮುಖವಾಗುತ್ತಿವೆ. ಸಾರ್ವಜನಿಕರು ಇನ್ನಷ್ಟು ಜಾಗೃತರಾಗಿ ಪೊಲೀಸ್ ಇಲಾಖೆಯೊಂದಿಗೆ ಸಹಕರಿಸಬೇಕೆಂದು ಗದಗ ಶಹರ ಪೊಲೀಸ್ ಠಾಣೆಯ ಸಿಪಿಐ ಡಿ.ಬಿ. ಪಾಟೀಲ ಹೇಳಿದರು.

ಅವರು ಮಂಗಳವಾರ ನಗರದ ಸುವಿಧಾ ಪತ್ತಿನ ಸೌಹಾರ್ದ ಸಹಕಾರಿ ಸಂಘದ ಸಭಾಂಗಣದಲ್ಲಿ ಸಂಘದ 2024ನೇ ಸಾಲಿನ ದಿನದರ್ಶಿಕೆ ಬಿಡುಗಡೆಗೊಳಿಸಿ ಮಾತನಾಡಿದರು.

ಪೊಲೀಸ್ ಠಾಣೆ, ಪೊಲೀಸ್ ಅಧಿಕಾರಿಗಳೆಂದರೆ ಸಾರ್ವಜನಿಕರಲ್ಲಿ ಭಯದ ವಾತಾವರಣ ದೂರಗೊಳ್ಳಬೇಕು. ಅನ್ಯಾಯ, ಶೋಷಣೆ, ವಂಚನೆ, ತಂಟೆ-ತಕರಾರುಗಳಿದ್ದರೆ, ಸಮಾಜಘಾತುಕ ಶಕ್ತಿಗಳಿಂದ ತೊಂದರೆಯಾಗುತ್ತಿದ್ದರೆ ಜನಸ್ನೇಹಿ ಪೊಲೀಸ್ ಠಾಣೆಗೆ ಬಂದು ಅಧಿಕಾರಿಗಳು, ಠಾಣೆಯ ಸಿಬ್ಬಂದಿಯನ್ನು ಕಂಡು ಪರಿಹಾರ ಕಂಡುಕೊಳ್ಳಲು ಮುಕ್ತ ಅವಕಾಶವಿದೆ ಎಂದರು.

ಮಹಿಳೆಯರ ಹಾಗೂ ಹಿರಿಯ ನಾಗರಿಕರ ಬಗ್ಗೆ ಗೌರವ ಮತ್ತು ಸಹಾನುಭೂತಿ ಹೊಂದಿರುವ ಪೊಲೀಸ್ ಅಧಿಕಾರಿಗಳು ಸಾರ್ವಜನಿಕರ ಅಹವಾಲುಗಳಿಗೆ ಸ್ಪಂದಿಸಿ ಸಮಸ್ಯೆಗೆ ಸಮಾಧಾನಕರ ಉತ್ತರ ನೀಡುತ್ತಾರೆ. ಶಾಂತಿ-ಸೌಹಾರ್ದತೆಗೆ ಹೆಸರಾಗಿರುವ ಗದಗ ಪರಿಸರದಲ್ಲಿ ಎಲ್ಲ ಪೊಲೀಸ್ ಅಧಿಕಾರಿಗಳು ಹಿರಿಯ ಮೇಲಾಧಿಕಾರಿಗಳ ಮಾರ್ಗದರ್ಶನದಲ್ಲಿ ಉತ್ತಮ ಕಾರ್ಯ ನಿರ್ವಹಿಸುತ್ತಿದ್ದು, ಸಮಾಜ ಸುಧಾರಣೆಯಲ್ಲಿ ಸರ್ವರ ಸಹಕಾರ ಇರಬೇಕೆಂದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಸಂಘದ ಅಧ್ಯಕ್ಷ ಬಿ.ವ್ಹಿ. ಸಂಕನೂರ ಸಂಘದ ಕಾರ್ಯಚಟುವಟಿಕೆಗಳನ್ನು, ನಿರ್ದೇಶಕರ ಸಹಕಾರ, ಗ್ರಾಹಕರ ಬೆಂಬಲವನ್ನು ಸ್ಮರಿಸಿದರು. ಸಂಘದ ಉಪಾಧ್ಯಕ್ಷ ಆರ್.ಎಫ್. ಅಗಸಿಮನಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಮಾರಂಭದಲ್ಲಿ ಶಾಂತಾ ಸಂಕನೂರ, ದ್ರುವಶೆಟ್ಟಿ ಅಬ್ಬಿಗೇರಿ, ರೇಖಾ ಆಸಂಗಿ, ಕೆ.ನಿಖಿಲ ರೆಡ್ಡಿ, ಸಂಗಮೇಶ್ವರಿ ಯಳವತ್ತಿ ಉಪಸ್ಥಿತರಿದ್ದರು. ಪದ್ಮಾ ಜಾಡರ ಪ್ರಾರ್ಥಿಸಿದರು.

ವೀರೇಶ ಹನಮಂತಗೌಡ್ರ ಪರಿಚಯಿಸಿದರು. ರವಿ ಹೊಸೂರ ನಿರೂಪಿಸಿದರು. ಮಹೇಶ ಬಿಜಲಿ ನಿರ್ವಹಿಸಿದರು. ದೀಪಾ ನರಗುಂದ ವಂದಿಸಿದರು.

# ಬಿಜೆಪಿ ಎಸ್.ಟಿ ಮೋರ್ಚಾದಿಂದ ವಿಜಯೋತ್ಸವ



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಎಸ್.ಟಿ ಮೋರ್ಚಾ ವತಿಯಿಂದ ಅಯೋಧ್ಯೆಯಲ್ಲಿ ಮಾನ ನಿಲ್ದಾಣಕ್ಕೆ ಶ್ರೀ ಮಹರ್ಷಿ ವಾಲ್ಮೀಕಿಯವರ ಹೆಸರನ್ನು ನಾಮಕರಣ ಮಾಡಿದ ಹಿನ್ನೆಲೆಯಲ್ಲಿ ಗದಗ ಜಿಲ್ಲಾ ಬಿಜೆಪಿ ಮತ್ತು ಎಸ್.ಟಿ ಮೋರ್ಚಾ ಪದಾಧಿಕಾರಿಗಳ ವತಿಯಿಂದ ನಗರದ ಹುಯಿಲಗೋಳ ನಾರಾಯಣರಾವ್ ವೃತ್ತ (ಟಾಂಗಾಕೂಟ)ದಲ್ಲಿ ಪಟಾಕಿ ಸಿಡಿಸಿ, ಸಿಹಿ ಹಂಚಿ ವಿಜಯೋತ್ಸವ ಆಚರಿಸಿದರು.

ಈ ಸಂದರ್ಭದಲ್ಲಿ ಎಸ್.ಟಿ ಮೋರ್ಚಾ ಮುಖಂಡರಾದ ಈಶಪ್ಪ ನಾಯ್ಕರ, ಪ್ರಶಾಂತ ನಾಯ್ಕರ, ಶ್ರೀಪತಿ ಉಡುಪಿ, ವಾಯ್.ಪಿ. ಅಡ್ನೂರ, ಯಲ್ಲಪ್ಪ ಶಿರಿ, ನಾಗರಾಜ ತಳವಾರ, ಮಂಜುನಾಥ ತಳವಾರ, ಬಸವರಾಜ ಕುರಗೋಡ, ಹನಮಂತಪ್ಪ ಚಿಗರಿ, ಬೂದಪ್ಪ ಹಳ್ಳಿ, ಎಚ್.ಸಿ. ಮಂಜುನಾಥ, ವಸಂತ ನಿರ್ಲಗಿ, ಮುತ್ತಣ್ಣ ಮೂಲಿಮನಿ, ಶಿವಾನಂದ ಚವಡಕಿ, ಕುಮಾರ ಭರಮಗೌಡ್ರ, ಶರಣು ಚಿಂಚಲಿ, ಅಶೋಕ ಕರೂರ, ಆನಂದ ಅಸುಂಡಿ, ಶರಣಪ್ಪ ತಳಕಲ, ಮಂಜುನಾಥ ಶಾಂತಗೇರಿ, ಸೋಮಣ್ಣ ಕರ್ಲವಾಡ, ಶಶಿಧರ ದಿಂಡೂರ, ರಾಮು ವಾಲ್ಮೀಕಿ, ಮಹೇಶ ಬಡಿಗೇರ, ಗೋವಿಂದಪ್ಪ ಪೂಜಾರ, ಮಾಂತೇಶ ಬಾತಾಖಾನಿ, ಸುರೇಶ ಮರಳಪ್ಪನವರ, ಮಂಜು ವಾಲ್ಮೀಕಿ ಮುಂತಾದವರು ಉಪಸ್ಥಿತರಿದ್ದರು.

# ಶಾಲೆಗೆ ಮೂಲ ಸೌಕರ್ಯ ಒದಗಿಸಿಕೊಡುವಂತೆ ಮನವಿ

■ವಿಜಯಸಾಕ್ಷಿ ಸುದ್ದಿ , ಗದಗ

ಪಟ್ಟಣದ ಸಿಸಿಎನ್ ಸರಕಾರಿ ಪ್ರೌಢಶಾಲೆಗೆ ಮೂಲಸೌಕರ್ಯಗಳನ್ನು ಒದಗಿಸಿಕೊಡುವಂತೆ ಎಸ್‌ಡಿಎಂಸಿ ಅಧ್ಯಕ್ಷ ನಾಗರಾಜ ಲಕ್ಕುಂಡಿ, ಜಿಲ್ಲಾ ಮಾಧ್ಯಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಎಂ.ಕೆ. ಲಮಾಣಿ ನೇತೃತ್ವದಲ್ಲಿ ಬುಧವಾರ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ನಾಗರಾಜ ಲಕ್ಕುಂಡಿ, ಬಿಜೆಪಿ ತಾಲೂಕಾಧ್ಯಕ್ಷ ಫಕ್ಕೀರೇಶ ರಟ್ಟಿಹಳ್ಳಿ, 2006-07ರಲ್ಲಿಯೇ ಶಾಲೆ ಪ್ರಾರಂಭವಾಗಿದೆ. ಪ್ರಸಕ್ತ ವರ್ಷದಲ್ಲಿ 8ನೇ ತರಗತಿಗೆ 183, 9ನೇ ತರಗತಿಗೆ 191 ಹಾಗೂ 10ನೇ ತರಗತಿಗೆ 139 ಹೀಗೆ ಒಟ್ಟು 493 ವಿದ್ಯಾರ್ಥಿಗಳು ದಾಖಲಾಗಿದ್ದಾರೆ. ಸತತವಾಗಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡುತ್ತಾ ಬಂದಿದೆ. ಆದರೆ ಕಳೆದ ನಾಲ್ಕು ವರ್ಷಗಳಿಂದ ಶಾಲೆಗೆ ಇಲಾಖೆಯ ವಾಹನಗಳು ಹಾಗೂ ಅಕ್ಷರ ದಾಸೋಹದ ಪಡಿತರ ವಾಹನಗಳು ಬರಲು ದಾರಿಯ ತೊಂದರೆಯಾಗಿದೆ. ಅದಕ್ಕಾಗಿ ಸಮರ್ಪಕ ರಸ್ತೆ ನಿರ್ಮಾಣ, ಸಭಾಭವನವನ್ನು ತಮ್ಮ ಅನುದಾನದಡಿಯಲ್ಲಿ ಮಾಡಿಸಿ ಕೊಡಬೇಕೆಂದು ವಿನಂತಿಸಿದರು.




ಈ ಸಂದರ್ಭದಲ್ಲಿ ಗಣೇಶ ಈರಕ್ಕನವರ, ವೆಂಕಟೇಶ ಅರ್ಕಸಾಲಿ, ವೀರಣ್ಣ ಅಂಗಡಿ, ಸಿದ್ದಪ್ಪ ಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

# ಜೆಡಿಎಸ್ ನೂತನ ಕಾರ್ಯಾಲಯ ಉದ್ಘಾಟನೆ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಾತ್ಯಾತೀತ ಜನತಾದಳ ಪಕ್ಷದ ನೂತನ ಜಿಲ್ಲಾ ಕಾರ್ಯಾಲಯವನ್ನು, ಹುಬ್ಬಳ್ಳಿ ರಸ್ತೆಯ ಸಿಡಿಓ ಜೈನ ಸ್ಕೂಲ್ ಹತ್ತಿರದ ಮಾನ್ವಿ ಲೇಔಟ್ ಮುಲ್ಲಾ ಕಾಂಪ್ಲೆಕ್ಸ್ ಮೇಲ್ಭಾಗದ ಹಾಲ್‌ನಲ್ಲಿ ಗದಗ ಜೆಡಿಎಸ್ ಪಕ್ಷದ ಜಿಲ್ಲಾಧ್ಯಕ್ಷ ಎಂ.ವೈ. ಮುಧೋಳ ಜ.5ರಂದು ಮಧ್ಯಾಹ್ನ 1 ಗಂಟೆಗೆ ಉದ್ಘಾಟಿಸಲಿದ್ದಾರೆ.




ಉದ್ಘಾಟನಾ ಕಾರ್ಯಕ್ರಮಕ್ಕೆ ಜೆಡಿಎಸ್ ರಾಜ್ಯ ಕಾರ್ಯಾಧ್ಯಕ್ಷ ಆಲ್ಕೋಡ್ ಹನುಮಂತಪ್ಪ, ಮುಖ್ಯ ಅತಿಥಿಗಳಾಗಿ ಸಿ.ಎಸ್. ಪಾಟೀಲ, ಅತಿಥಿಗಳಾಗಿ ಶಿರಹಟ್ಟಿ ಮತಕ್ಷೇತ್ರದ ಅಧ್ಯಕ್ಷ ಶಂಕ್ರಣ್ಣ ಬಾಳಿಕಾಯಿ, ಲಕ್ಷ್ಮೇಶ್ವರ ಪುರಸಭೆ ಸದಸ್ಯರಾದ ಪ್ರವೀಣ್ ಬಾಳಿಕಾಯಿ, ಮುಸ್ತಫಾ ಶಿರಹಟ್ಟಿ, ಸುರಣಗಿ ಗ್ರಾ.ಪಂ ಸದಸ್ಯ ಪ್ರವೀಣ ಸುರಣಗಿ, ಎಲ್ಲ ತಾಲೂಕುಗಳ ಹಾಲಿ ಹಾಗೂ ಮಾಜಿ ಅಧ್ಯಕ್ಷರು, ಪದಾಧಿಕಾರಿಗಳು, ಕಾರ್ಯಕರ್ತರು ಭಾಗ ವಹಿಸುವರು.

ಜೆಡಿಎಸ್ ಪಕ್ಷದ ಹಿತೈಷಿಗಳು, ಮಾರ್ಗದರ್ಶಕರು, ಕಾರ್ಯಕರ್ತರು ಕಾರ್ಯಕ್ರಮಕ್ಕೆ ತಪ್ಪದೇ ಬರಬೇಕೆಂದು ಜಿಲ್ಲಾಧ್ಯಕ್ಷ ಎಂ.ವೈ. ಮುಧೋಳ ಸ್ವಾಗತ ಕೋರಿದ್ದಾರೆ.


ಕರ್ನಾಟಕ ಸರ್ಕಾರ

**ಕಾರ್ಯನಿರ್ವಾಹಕ ಇಂಜಿನೀಯರರು,**

**ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ ವಿಭಾಗ, ಗದಗ**

ಕಾ.ಇ: ಗ್ರಾ.ಕು.ನೀ&ನೈ.ವಿ/ಗದಗ/ಕಿ.ಇಂ/ಟೆಂಡರ್/2023-24/1116 ದಿನಾಂಕ : 03.01.2024

**ಟೆಂಡರ್ ಪ್ರಕಟಣೆ**

ಪಂಚಾಯತ ರಾಜ್ ಇಂಜಿನೀಯರಿಂಗ ಇಲಾಖೆಯಲ್ಲಿ ನೋಂದಾಯಿಸಿದ ಗುತ್ತಿಗೆದಾರರಿಂದ ಐಟಂ ದರದಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ-2000 ಮತ್ತು ಇತ್ತೀಚಿನ ತಿದ್ದುಪಡಿಗಳಂತೆ, ಕುಡಿಯುವ ನೀರು ಸರಬರಾಜು ಯೋಜನೆ ಅಡಿಯಲ್ಲಿ ಗದಗ ಜಿಲ್ಲೆಯ ಈ ಕೆಳಗಿನ ಕಾಮಗಾರಿಯ ಟೆಂಡರನ್ನು "ಇ ಪ್ರೊಕ್ಯುರಮೆಂಟ್-2" ಮುಖಾಂತರ ಕರೆಯಲಾಗಿದೆ.

| ಕ್ರ.ಸಂ | ಇಂಡೆಂಟ್ ಸಂಖ್ಯೆ/ಕಾಮಗಾರಿಯ ಹೆಸರು | ಟೆಂಡರಿಗಿಟ್ಟ ಮೊತ್ತ | ಮುಂಗಡ ಠೇವಣಿ ಮೊತ್ತ |
|---|---|---|---|
| 1 | Construction of OHT at Jigalur Village in Ron Taluk/call-2 | **9.85** ಲಕ್ಷಗಳು | **25000.00** |

ಈ ಕಾಮಗಾರಿಗಳ ವಿವರಗಳಿಗಾಗಿ ಹಾಗೂ ಡೌನಲೋಡ ಮಾಡಿಕೊಳ್ಳಲು ಗುತ್ತಿಗೆದಾರರು ಕರ್ನಾಟಕ ಸರಕಾರದ "ಇ ಪ್ರೋಕ್ಯೂರಮೆಂಟ್ " ವೆಬ್‌ಸೈಟ್ **https://kppp.karnataka.gov.in** ನಲ್ಲಿ ನೋಡಿಕೊಳ್ಳಬಹುದು. ಟೆಂಡರ ಸಲ್ಲಿಸಲು ಪ್ರಾರಂಭವಾಗುವ ದಿನಾಂಕ : **04.01.2024**, ಪ್ರಶ್ನೋತ್ತರದ ಕೊನೆಯ ದಿನಾಂಕ : **08.01.2024**. ಟೆಂಡರ ಸ್ವೀಕರೀಸುವ ಕೊನೆಯ ದಿನಾಂಕ : **13.01.2024** ತಾಂತ್ರಿಕ & ಆರ್ಥಿಕ ಬಿಡ್ ತೆರೆಯುವ ದಿನಾಂಕ : **16.01.2024**

ಸಹಿ/- ಕಾರ್ಯನಿರ್ವಾಹಕ ಇಂಜಿನೀಯರರು,
ಗ್ರಾ.ಕು.ನೀ. ಮತ್ತು ನೈರ್ಮಲ್ಯ ವಿಭಾಗ, ಗದಗ

ವಾಸಾಸಂಇ/ಗದಗ/ಕೆಎಸ್‌ಎಂಸಿಎ/424/2023-24


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka